Volume : 9 | Issue : 171 | September : 24 : 2026 : Thursday
ಸಂಪುಟ : 9 | ಸಂಚಿಕೆ : 171 | ಸೆಪ್ಟಂಬರ್ : 24 : 2026 : ಗುರುವಾರ
www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481



ಗುಜರಾತ್‌ನ ಏಕತಾ ನಗರದಲ್ಲಿ ನಡೆದ 72ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ನಟಿ ಯಾಮಿ ಗೌತಮ್ ಪ್ರಶಸ್ತಿ ಸ್ವೀಕರಿಸಿದರು.

ಸಿಎಂ ರಾಜೀನಾಮೆಗೆ ಆರ್.ಅಶೋಕ್ ಆಗ್ರಹ ಪುಟ 4


ಸೆ.26ಕ್ಕೆ 'ಪರಮ್ ವಿಹಾರ' ಸಾಂಸ್ಕೃತಿಕ ಸಂಜೆ ಪುಟ 3



# "ಸಿಎಂ ಡಿಕೆಶಿ ಟ್ರ್ಯಾಪ್‌ಗೆ ಕುಮಾರಸ್ವಾಮಿ ಸಂಚು"

● ವಿಕ್ರಮ ವಾಹಿನಿ । ಬೆಂಗಳೂರು

**ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ರನ್ನು ಟ್ರ್ಯಾಪ್ ಮಾಡಲು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಸಂಚು ರೂಪಿಸಿದ್ದಾರೆ ಎಂದು ಶಾಸಕ ಎಸ್.ಟಿ. ಸೋಮಶೇಖರ್ ಆರೋಪಿಸಿದ್ದಾರೆ. ನಕಲಿ ಸಿಮ್ ಕಾರ್ಡ್‌ಗಳ ಮೂಲಕ ಅಯೋಧ್ಯೆ, ಕೆನಡಾ ಹಾಗೂ ನೇಪಾಳಕ್ಕೆ ಬೆಂಬಲಿಗರನ್ನು ಕಳುಹಿಸಿ ತೇಜೋವಧೆಗೆ ಯತ್ನಿಸಲಾಗುತ್ತಿದೆ ಎಂದು ದೂರಿದ್ದಾರೆ. ಈ ನಡುವೆ ಕುಮಾರಸ್ವಾಮಿ ಬಿಡುಗಡೆ ಮಾಡುವುದಾಗಿ ಹೇಳಿರುವ 'ಆಡಿಯೋ ಬಾಂಬ್' ಕುರಿತು ರಾಜಕೀಯ ವಲಯದಲ್ಲಿ ಕುತೂಹಲ ಮತ್ತಷ್ಟು ಹೆಚ್ಚಿದೆ.**



ನಕಲಿ ಸಿಮ್ ಕಾರ್ಡ್ ತೆಗೆಸಿಕೊಟ್ಟು ಅಯೋಧ್ಯೆ, ಕೆನಡಾ, ನೇಪಾಳಕ್ಕೆ ತಮ್ಮ ಬೆಂಬಲಿಗರನ್ನು ಕಳುಹಿಸಿ ಮುಖ್ಯಮಂತ್ರಿ ಶಿವಕುಮಾರ್ ಅವರನ್ನು ಟ್ರ್ಯಾಪ್ ಮಾಡಲು ಕೇಂದ್ರ ಸಚಿವ ಎಚ್.ಡಿ. ಕುಮಾರ ಸ್ವಾಮಿ ಸಂಚು ರೂಪಿಸಿದ್ದಾರೆ ಎಂದು ಶಾಸಕ ಎಸ್.ಟಿ. ಸೋಮಶೇಖರ್ ಬಾಂಬ್ ಸಿಡಿಸಿದ್ದಾರೆ.

ಮುಖ್ಯಮಂತ್ರಿಗಳು ಕಸ್ತೂರಿ ರಂಗನ್ ವರದಿ ಬಗ್ಗೆ ಆರೇಳು ಜಿಲ್ಲೆಗಳಲ್ಲಿ ಪ್ರವಾಸ ಮಾಡಿ ಅಭಿಪ್ರಾಯ ಸಂಗ್ರಹಿಸಿ, ವಿಶೇಷ ಅಧಿವೇಶನ ನಡೆಸುತ್ತಿದ್ದಾರೆ. ಇದನ್ನು ಕೇಂದ್ರ ಸಚಿವ ಕುಮಾರಸ್ವಾಮಿ ಅವರಿಗೆ ಸಹಿಸಲಾಗುತ್ತಿಲ್ಲ, ಹೀಗಾಗಿ ಮುಖ್ಯಮಂತ್ರಿ ತೇಜೋವಧೆಗೆ ಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

ವಿಧಾನಸೌಧದಲ್ಲಿ ಮಾತನಾಡಿದ ಸೋಮಶೇಖರ್, ನಕಲಿ ಸಿಮ್ ಕಾರ್ಡ್ ತೆಗೆದುಕೊಟ್ಟು,ಅಯೋಧ್ಯೆ ಕೆನಡಾ, ನೇಪಾಳಕ್ಕೆ ಕಳುಹಿಸಿ ಸಿಎಂ ಡಿಕೆ ಶಿವಕುಮಾರ್ ಅವರನ್ನು ಟ್ರ್ಯಾಪ್ ಮಾಡುತ್ತಿದ್ದಾರೆ. ಅವರಿಗೆ ಪ್ರವಾಸ ವೆಚ್ಚ ಎಲ್ಲವನ್ನು ಕುಮಾರಸ್ವಾಮಿ ಅವರೇ ಭರಿಸುತ್ತಿದ್ದಾರೆ.

ಅಮಿತ್ ಶಾ ಅವರ ಸೂಚನೆಯಂತೆ ತಾವು ಕೆಲಸ ಮಾಡುತ್ತಿರುವುದಾಗಿ ಕುಮಾರಸ್ವಾಮಿ ಹೇಳಿದ್ದಾರೆ, ಆದರೆ ನಾನು ಮೂರು ವರ್ಷ ಬಿಜೆಪಿಯಲ್ಲಿದ್ದೆ, ಅಮಿತ್ ಶಾ ಅಂತ ಕೆಲಸ ಮಾಡುವುದಿಲ್ಲ ಎಂದರು.

ಕುಮಾರಸ್ವಾಮಿಗೆ ತಾಕತ್ ಇದ್ದರೆ ಬೆಂಗಳೂರಿನಲ್ಲಿದ್ದುಕೊಂಡೆ ಶಿವಕುಮಾರ್ ವಿರುದ್ಧ ಕೆಲಸ ಮಾಡಲಿ, ಅದನ್ನು ಬಿಟ್ಟು ನಕಲಿ ಸಿಮ್ ಕಾರ್ಡ್ ತೆಗೆದುಕೊಟ್ಟು ಮುಖ್ಯಮಂತ್ರಿಗಳ ತೇಜೋವಧೆಗೆ ಯತ್ನಿಸುತ್ತಿದ್ದಾರೆ. ಇದು ನಿಮ್ಮ ಘನತೆಗೆ ತಕ್ಕದಲ್ಲ, ಏನೇ ಮಾಡುವುದಿದ್ದರೂ ನೇರವಾಗಿ ಮಾಡಿ, ಬೆನ್ನಿಗೆ ಚೂರಿ ಹಾಕಬೇಡಿ. ಪ್ರಧಾನಿ ನರೇಂದ್ರ ಮೋದಿ ಅವರ ಸಂಪುಟದಲ್ಲಿ ಉತ್ತಮ ಖಾತೆ ಹೊಂದಿದ್ದರೂ ಕರ್ನಾಟಕಕ್ಕೆ ಯಾವುದೇ ಒಂದು ಉತ್ತಮ ಕೆಲಸ ಮಾಡಿಲ್ಲ ಎಂದು ಆರೋಪಿಸಿದರು.

ದೇಶವೇ ಅಲ್ಲೋಲ ಕಲ್ಲೋಲವಾಗುವಂತಹ ಸುದ್ದಿ ಹಾಗೂ ದಾಖಲೆಗಳನ್ನು ಬಿಡುಗಡೆ ಮಾಡುವುದಾಗಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿಕೆ ನೀಡಿದ್ದರು. ಇದರ ಬೆನ್ನಲ್ಲೇ, 'ಆಡಿಯೋ ಬಾಂಬ್' ಕುರಿತು ರಾಜಕೀಯ ವಲಯದಲ್ಲಿ ಕುತೂಹಲ ಹೆಚ್ಚಾಗಿದೆ.

ಕುಮಾರಸ್ವಾಮಿ ಅವರು ದಾಖಲೆಗಳನ್ನ ಬಿಡುಗಡೆ ಮಾಡುವ ಮುನ್ನವೇ, ಅದರ ಕುರಿತಾದ ಮಾಹಿತಿ ಅಥವಾ ಆಡಿಯೋ ಸೋರಿಕೆಯಾಯಿತಾ ಎಂಬ ಪ್ರಶ್ನೆಯೂ ಎದುರಾಗಿದೆ.

ಈ ಎಲ್ಲ ಬೆಳವಣಿಗೆಗಳ ಬಗ್ಗೆ ಶಾಸಕ ಎಸ್.ಟಿ ಸೋಮಶೇಖರ್ ನೀಡಿರುವ ಹೇಳಿಕೆ ಮತ್ತಷ್ಟು ಕುತೂಹಲಕ್ಕೆ ಕಾರಣವಾಗಿದೆ. ಕುಮಾರಸ್ವಾಮಿ ಆಡಿಯೋ ಬಿಡುಗಡೆ ಮಾಡಬಹುದು ಎಂಬ ಸುಳಿವಿನ ಬೆನ್ನಲ್ಲೇ ಸೋಮಶೇಖರ್ ನೀಡಿರುವ ಹೇಳಿಕೆಯ ಹಿಂದಿನ ಉದ್ದೇಶವೇನು ಎಂಬ ಚರ್ಚೆ ಕೂಡ ಕುತೂಹಲ ಕೆರಳಿಸಿದೆ.

# ವಿಮಾ ವಂಚನೆ ತನಿಖೆಗೆ ಎಸ್‌ಐಟಿ

ವಿಮಾ ಕಂಪನಿಗಳಿಗೆ ಸಲ್ಲಿಕೆಯಾಗುವ ವಂಚನೆಪೂರಿತ ಕ್ಲೇಮ್‌ಗಳ ತ್ವರಿತ ತನಿಖೆಗಾಗಿ ರಾಜ್ಯ ಸರ್ಕಾರ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿದೆ. ರಾಜ್ಯಾದ್ಯಂತ ವ್ಯಾಪ್ತಿ ಹೊಂದಿರುವ ಎಸ್‌ಐಟಿಯಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳನ್ನು ನೇಮಿಸಲಾಗಿದ್ದು, ವಿಮಾ ವಂಚನೆಗೆ ಸಂಬಂಧಿಸಿದ ಎಲ್ಲ ದೂರುಗಳನ್ನು ಸಮಗ್ರವಾಗಿ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ.

● ವಿಕ್ರಮ ವಾಹಿನಿ । ಬೆಂಗಳೂರು

ವಿಮಾ ಕಂಪನಿಗಳಿಗೆ ಸಲ್ಲಿಕೆಯಾಗುವ ವಂಚನೆಪೂರಿತ ಕ್ಲೇಮ್‌ಗಳ ಕುರಿತು ದೂರುಗಳನ್ನು ದಾಖಲಿಸಿಕೊಂಡು ತ್ವರಿತ ತನಿಖೆ ನಡೆಸಲು ರಾಜ್ಯ ಮಟ್ಟದಲ್ಲಿ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿ ಸರ್ಕಾರ ಆದೇಶ ಹೊರಡಿಸಿದೆ ಎಂದು ಗೃಹ ಇಲಾಖೆ ಪ್ರಕಟಣೆ ತಿಳಿಸಿದೆ.

ವಿಮೆ ಕಂಪನಿಗಳ ವಿರುದ್ಧದ ವಂಚನೆಪೂರಿತ ಕ್ಲೇಮ್‌ಗಳಿಗೆ ಸಂಬಂಧಿಸಿದಂತೆ ದೇಶದಾದ್ಯಂತ ರಾಜ್ಯ ಮಟ್ಟದಲ್ಲಿ ವಿಶೇಷ ತನಿಖಾ ತಂಡಗಳನ್ನು ರಚಿಸುವಂತೆ ಸುಪ್ರೀಂ ಕೋರ್ಟ್ ಎಸ್‌ಎಲ್‌ಪಿ (ಸಿವಿಲ್) ಸಂಖ್ಯೆ 5582/2023ರ ತೀರ್ಪಿನಲ್ಲಿ ನಿರ್ದೇಶನ ನೀಡಿರುವ ಹಿನ್ನೆಲೆಯಲ್ಲಿ ಕರ್ನಾಟಕದಲ್ಲಿಯೂ ಎಸ್‌ಐಟಿ ರಚಿಸಲಾಗಿದೆ. ಗೃಹ ಇಲಾಖೆಯ ಸೆ.22, 2026ರ ಸರ್ಕಾರಿ ಆದೇಶದಂತೆ ರಚಿಸಲಾಗಿರುವ ತಂಡದಲ್ಲಿ ಪೊಲೀಸ್ ಮಹಾನಿರೀಕ್ಷಕರ ಹುದ್ದೆಯ ಅಧಿಕಾರಿಯನ್ನು ಅಧ್ಯಕ್ಷರನ್ನಾಗಿ ಹಾಗೂ ಸಿಐಡಿಯಿಂದ



ನಾಮನಿರ್ದೇಶನಗೊಳ್ಳುವ ಪೊಲೀಸ್ ಅಧೀಕ್ಷಕರನ್ನು ಸದಸ್ಯರನ್ನಾಗಿ ನೇಮಿಸಲಾಗಿದೆ. ಇದಲ್ಲದೆ, ಪೊಲೀಸ್ ಮಹಾನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರು ನಾಮನಿರ್ದೇಶನ ಮಾಡುವ ಒಬ್ಬ ಉಪ ಪೊಲೀಸ್ ಅಧೀಕ್ಷಕರು ಹಾಗೂ ಮೂವರು ಪೊಲೀಸ್ ಇನ್‌ಸ್ಪೆಕ್ಟರ್‌ಗಳು ತಂಡದ ಸದಸ್ಯರಾಗಿರುತ್ತಾರೆ.

ಈ ವಿಶೇಷ ತನಿಖಾ ತಂಡಕ್ಕೆ ಕರ್ನಾಟಕ ರಾಜ್ಯಾದ್ಯಂತ ವ್ಯಾಪ್ತಿ ಕಲ್ಪಿಸಲಾಗಿದ್ದು, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ, 2023ರ ಸೆಕ್ಷನ್ 2(1)ರ ಅಡಿಯಲ್ಲಿ ಪೊಲೀಸ್ ಠಾಣೆ ಎಂದು ಘೋಷಿಸಲಾಗಿದೆ. ತನಿಖಾ ತಂಡದ ಅಧಿಕಾರಿಗಳಿಗೆ ಸೆಕ್ಷನ್ 193ರ ಅನ್ವಯ ಸಂಬಂಧಪಟ್ಟ ನ್ಯಾಯಾಲಯಗಳಿಗೆ ಅಂತಿಮ ವರದಿ ಸಲ್ಲಿಸುವ ಅಧಿಕಾರವನ್ನೂ ನೀಡಲಾಗಿದೆ. ಎಸ್‌ಐಟಿ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು, ಪೊಲೀಸ್ ಪ್ರಧಾನ ಕಚೇರಿ, ಬೆಂಗಳೂರು ಅವರ ಮೇಲ್ವಿಚಾರಣೆಯಲ್ಲಿ ಕಾರ್ಯನಿರ್ವಹಿಸಲಿದೆ.

ವಿಮೆ ಕಂಪನಿಗಳಿಂದ ಸ್ವೀಕರಿಸುವ ಎಲ್ಲ ವಂಚನೆ ದೂರುಗಳನ್ನು ಎಸ್‌ಐಟಿ ಸಮಗ್ರವಾಗಿ ತನಿಖೆ ನಡೆಸಿ, ತನಿಖಾ ವರದಿಗಳನ್ನು ಯಾವುದೇ ವಿಳಂಬವಿಲ್ಲದೆ ಪೊಲೀಸ್ ಮಹಾನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರ ಮೂಲಕ ಸರ್ಕಾರಕ್ಕೆ ಸಲ್ಲಿಸಬೇಕು. ತನಿಖೆಯ ಪ್ರಗತಿಯನ್ನು ಸಹ ನಿಯಮಿತವಾಗಿ ವರದಿ ಮಾಡಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ.

## ಕೆಪಿಎಸ್‌ಸಿ ಅಕ್ರಮ ತನಿಖೆ ಎಸ್‌ಐಟಿ ಸದಸ್ಯ ಕುಶಲ್ ಚೌಕ್ಸಿ ಚಿತ್ರದುರ್ಗ ಎಸ್ಪಿಯಾಗಿ ವರ್ಗಾವಣೆ

● ವಿಕ್ರಮ ವಾಹಿನಿ । ಬೆಂಗಳೂರು

ಕೆಪಿಎಸ್‌ಸಿ ಪಶುವೈದ್ಯಾಧಿಕಾರಿ ನೇಮಕಾತಿ ಅಕ್ರಮ ಪ್ರಕರಣದ ತನಿಖೆಗೆ ಹೈಕೋರ್ಟ್ ರಚಿಸಿರುವ ಡಿಜಿಪಿ ಅಲೋಕ್ ಕುಮಾರ್ ನೇತೃತ್ವದ ಎಸ್‌ಐಟಿಯ ಸದಸ್ಯರಾಗಿದ್ದ ಐಪಿಎಸ್ ಅಧಿಕಾರಿ ಕುಶಲ್ ಚೌಕ್ಸಿ ಅವರನ್ನು ಸರ್ಕಾರ ಚಿತ್ರದುರ್ಗ ಜಿಲ್ಲಾ ಪೊಲೀಸ್ ಅಧೀಕ್ಷಕರಾಗಿ ವರ್ಗಾವಣೆ ಮಾಡಿ ಆದೇಶಿಸಿದೆ.

ಸೆ.21ರಂದು ಹೈಕೋರ್ಟ್ ಅವರನ್ನು ಪ್ರಕರಣದ ತನಿಖಾಧಿಕಾರಿಯಾಗಿ ನೇಮಿಸಿತ್ತು. ಇದಾದ 48 ಗಂಟೆಗಳಲ್ಲೇ ಅವರನ್ನು ಚಿತ್ರದುರ್ಗ ಎಸ್ಪಿಯಾಗಿ ವರ್ಗಾವಣೆ ಮಾಡಿರುವುದು ಗಮನ ಸೆಳೆದಿದೆ. ಈ ಹಿಂದೆ ಚೌಕ್ಸಿ ಚಿಕ್ಕಬಳ್ಳಾಪುರ ಜಿಲ್ಲಾ ಎಸ್ಪಿಯಾಗಿದ್ದು, ಆ.29ರಂದು ಬೆಂಗಳೂರು ನಗರ ಆಡಳಿತ ವಿಭಾಗದ ಡಿಸಿಪಿಯಾಗಿ ವರ್ಗಾವಣೆಗೊಂಡಿದ್ದರು. ಇದೀಗ ಒಂದೇ ತಿಂಗಳಲ್ಲಿ ಎರಡನೇ ಬಾರಿ ವರ್ಗಾವಣೆಗೊಂಡಿದ್ದಾರೆ. ಚಿತ್ರದುರ್ಗ ಎಸ್ಪಿ ಹುದ್ದೆ ರಂಜಿತ್ ಕುಮಾರ್ ವರ್ಗಾವಣೆಯಿಂದ ತೆರವಾಗಿತ್ತು. ಇದೀಗ ಅವರ ಸ್ಥಾನಕ್ಕೆ ಕುಶಲ್ ಚೌಕ್ಸಿ ಅವರನ್ನು ನೇಮಿಸಲಾಗಿದ್ದು, ಬುಧವಾರದಿಂದಲೇ ಹೊಸ ಜವಾಬ್ದಾರಿ ವಹಿಸಿಕೊಳ್ಳಲಿದ್ದಾರೆ.

## ರೌಡಿ ಶೀಟರ್‌ಗಳ ಜೊತೆ ಎಣ್ಣೆ ಪಾರ್ಟಿ; ಎಎಸ್‌ಐ ಅಮಾನತು

● ವಿಕ್ರಮ ವಾಹಿನಿ । ಚಿಕ್ಕಮಗಳೂರು

ರೌಡಿ ಶೀಟರ್‌ಗಳ ಜೊತೆ ಬಾರ್‌ನಲ್ಲಿ ಪಾರ್ಟಿ ಮಾಡಿದ ಆರೋಪದ ಹಿನ್ನೆಲೆಯಲ್ಲಿ ಕಡೂರು ತಾಲೂಕಿನ ಸಖರಾಯಪಟ್ಟಣ ಠಾಣೆಯ ಎಎಸ್‌ಐ ವೀರೇಂದ್ರ ಅವರನ್ನು ಅಮಾನತು ಮಾಡಲಾಗಿದೆ. ಚಿಕ್ಕಮಗಳೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿತೇಂದ್ರ ಕುಮಾರ್ ದಯ್ಮಾ ಅಮಾನತು ಆದೇಶ ಹೊರಡಿಸಿದ್ದಾರೆ.



ಎಎಸ್‌ಐ ವೀರೇಂದ್ರ ಅವರು ರಾತ್ರಿ ವೇಳೆ ರೌಡಿ ಶೀಟರ್‌ಗಳ ಜೊತೆ ಬಾರ್‌ನಲ್ಲಿ ಜೋರಾಗಿ ಸಂಗೀತ ಹಾಕಿಕೊಂಡು ಪಾರ್ಟಿ ನಡೆಸಿದ್ದರು ಎನ್ನಲಾಗಿದೆ. ಇದರಿಂದ ಆಕ್ರೋಶಗೊಂಡ ಗ್ರಾಮಸ್ಥರು ಬಾರ್ ಮುಂಭಾಗ ರಾತ್ರಿ ಪ್ರತಿಭಟನೆ ನಡೆಸಿದ್ದರು.

ಈ ಘಟನೆಗೆ ಸಂಬಂಧಿಸಿದಂತೆ ಎಎಸ್‌ಐ ವಿರುದ್ಧ ನಿರಂತರವಾಗಿ ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ ಎಸ್‌ಪಿ ಅಮಾನತು ಕ್ರಮ ಕೈಗೊಂಡಿದ್ದಾರೆ ಎಂದು ತಿಳಿದುಬಂದಿದೆ.

## ಕರ್ನಾಟಕ ಬಿಜೆಪಿ ಉಸ್ತುವಾರಿಯಾಗಿ ಹರೀಶ್ ದ್ವಿವೇದಿ

● ವಿಕ್ರಮ ವಾಹಿನಿ । ನವದೆಹಲಿ

ಭಾರತೀಯ ಜನತಾ ಪಕ್ಷ (ಬಿಜೆಪಿ) ದೇಶದ 28 ರಾಜ್ಯಗಳು ಹಾಗೂ 8 ಕೇಂದ್ರಾಡಳಿತ ಪ್ರದೇಶಗಳಿಗೆ ಹೊಸ ಉಸ್ತುವಾರಿಗಳು ಮತ್ತು ಸಹ ಉಸ್ತುವಾರಿಗಳನ್ನು ನೇಮಕ ಮಾಡಿದೆ. ಪಕ್ಷದ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರ ಅನುಮೋದನೆಯೊಂದಿಗೆ ನೇಮಕಾತಿಗಳು ಪ್ರಕಟವಾಗಿದ್ದು, ತಕ್ಷಣದಿಂದಲೇ ಜಾರಿಗೆ ಬಂದಿವೆ. ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹರೀಶ್ ದ್ವಿವೇದಿ ಅವರನ್ನು ಕರ್ನಾಟಕ ಮತ್ತು ಬಿಹಾರದ ಉಸ್ತುವಾರಿಯಾಗಿ ನೇಮಿಸಲಾಗಿದೆ. ಕರ್ನಾಟಕದ ಸಹ ಉಸ್ತುವಾರಿಯಾಗಿ ಡಾ. ಎಂ. ವೆಂಕಟೇಶ್ವರಲು ಅವರನ್ನು ನೇಮಿಸಲಾಗಿದೆ.



ಮಾಜಿ ಕೇಂದ್ರ ಸಚಿವೆ ಸ್ಮೃತಿ ಇರಾನಿ ಅವರಿಗೆ ಹರಿಯಾಣ ಮತ್ತು ಛತ್ತೀಸ್‌ಗಢದ ಜವಾಬ್ದಾರಿ ನೀಡಲಾಗಿದ್ದು, ವಿನೋದ್ ತಾವ್ಡೆ ಅವರನ್ನು ಉತ್ತರ ಪ್ರದೇಶದ ಉಸ್ತುವಾರಿಯನ್ನಾಗಿ ನೇಮಿಸಲಾಗಿದೆ. ರಾಮ್ ಮಾಧವ್ ಅವರಿಗೆ ತಮಿಳುನಾಡು ಮತ್ತು ಉತ್ತರಾಖಂಡದ ಜವಾಬ್ದಾರಿ ನೀಡಲಾಗಿದೆ. ತರುಣ್ ಚುಗ್ ಗುಜರಾತ್ ಉಸ್ತುವಾರಿಯಾಗಿದ್ದು, ಸತೀಶ್ ಪೂನಿಯಾ ಜಮ್ಮು-ಕಾಶ್ಮೀರ ಮತ್ತು ಪಂಜಾಬ್‌ನ ಉಸ್ತುವಾರಿ ವಹಿಸಲಿದ್ದಾರೆ.

ಇದೇ ವೇಳೆ ಸುನಿಲ್ ಬನ್ಸಾಲ್ ಅವರಿಗೆ ಪಶ್ಚಿಮ ಬಂಗಾಳ ಮತ್ತು ತೆಲಂಗಾಣ, ಬೈಜಯಂತ್ ಜಯ್ ಪಾಂಡಾ ಅವರಿಗೆ ಮಹಾರಾಷ್ಟ್ರ ಹಾಗೂ ಎಂ. ನಾಗರಾಜ್ ಅವರಿಗೆ ಕೇರಳದ ಜವಾಬ್ದಾರಿ ನೀಡಲಾಗಿದೆ. ವಿವಿಧ ರಾಜ್ಯಗಳಿಗೆ ಸಹ ಉಸ್ತುವಾರಿಗಳನ್ನೂ ನೇಮಿಸಲಾಗಿದೆ.

ಸಂಘಟನಾತ್ಮಕ ಪುನರ್‌ವ್ಯವಸ್ಥೆಯ ಭಾಗವಾಗಿ ಅನಿಲ್ ಬಲುನಿ ಅವರನ್ನು ಪಕ್ಷದ ಸಂವಹನ ವಿಭಾಗದ ಸಂಯೋಜಕರನ್ನಾಗಿ ನೇಮಿಸಲಾಗಿದೆ. ಈ ವಿಭಾಗದಡಿ ರಾಷ್ಟ್ರೀಯ ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣ ಘಟಕಗಳು ಕಾರ್ಯನಿರ್ವಹಿಸಲಿವೆ. ಆಶಿಶ್ ಉಷಾ ಅಗ್ರವಾಲ್ ಅವರನ್ನು ರಾಷ್ಟ್ರೀಯ ಮಾಧ್ಯಮ ವಿಭಾಗದ ಸಂಯೋಜಕರನ್ನಾಗಿ ನೇಮಿಸಲಾಗಿದೆ.

ಹೊಸ ನೇಮಕಾತಿಗಳ ಮೂಲಕ ರಾಜ್ಯವಾರು ಸಂಘಟನಾ ಚಟುವಟಿಕೆಗಳಿಗೆ ಮತ್ತಷ್ಟು ವೇಗ ನೀಡಲು ಪಕ್ಷದ ವರಿಷ್ಠರು ಮುಂದಾಗಿದ್ದಾರೆ. ಮುಂಬರುವ ದಿನಗಳಲ್ಲಿ ರಾಜ್ಯಗಳಲ್ಲಿ ಪಕ್ಷದ ಸಂಘಟನೆ ಬಲಪಡಿಸುವುದು ಹಾಗೂ ವಿವಿಧ ಘಟಕಗಳ ನಡುವೆ ಸಮನ್ವಯ ಹೆಚ್ಚಿಸುವ ಜವಾಬ್ದಾರಿ ನೂತನ ಉಸ್ತುವಾರಿಗಳ ಮೇಲಿದೆ.

## ಭಾನುವಾರವೂ ಬ್ಯಾಂಕ್ ಓಪನ್; 28ರಿಂದ 3 ದಿನ ಮುಷ್ಕರ

● ವಿಕ್ರಮ ವಾಹಿನಿ । ನವದೆಹಲಿ

ಸೆ.28ರಿಂದ 30ರವರೆಗೆ ದೇಶಾದ್ಯಂತ ಬ್ಯಾಂಕ್ ಮುಷ್ಕರಕ್ಕೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಗ್ರಾಹಕರಿಗೆ ಬ್ಯಾಂಕಿಂಗ್ ಸೇವೆಗಳು ದೀರ್ಘಕಾಲ ವ್ಯತ್ಯಯಗೊಳ್ಳದಂತೆ ಕೇಂದ್ರ ಸರ್ಕಾರ ಸೆ.27ರ ಭಾನುವಾರದಂದು ಸಾರ್ವಜನಿಕ ವಲಯದ ಬ್ಯಾಂಕ್‌ಗಳು ಹಾಗೂ ಪ್ರಾದೇಶಿಕ ಗ್ರಾಮೀಣ ಬ್ಯಾಂಕ್‌ಗಳನ್ನು (RRB) ಸಾಮಾನ್ಯವಾಗಿ ಕಾರ್ಯನಿರ್ವಹಿಸುವಂತೆ ಸೂಚಿಸಿದೆ.

ಸಾಮಾನ್ಯವಾಗಿ ಸೆ.26 ನಾಲ್ಕನೇ ಶನಿವಾರ ಹಾಗೂ ಸೆ.27 ಭಾನುವಾರವಾಗಿರುವುದರಿಂದ ಬ್ಯಾಂಕ್‌ಗಳಿಗೆ ರಜೆ ಇರುತ್ತಿತ್ತು. ಇದರ ಬೆನ್ನಲ್ಲೇ ಸೆ.28ರಿಂದ ಮೂರು ದಿನಗಳ ಮುಷ್ಕರ ನಡೆಯಲಿರುವ ಹಿನ್ನೆಲೆಯಲ್ಲಿ ಸತತ ಐದು ದಿನಗಳ ಕಾಲ ಶಾಖಾ ಮಟ್ಟದ ಸೇವೆಗಳಿಗೆ ವ್ಯತ್ಯಯ ಉಂಟಾಗುವ ಸಾಧ್ಯತೆ ಇತ್ತು. ಇದನ್ನು ತಪ್ಪಿಸುವ ಉದ್ದೇಶದಿಂದ ಭಾನುವಾರವೂ ಬ್ಯಾಂಕ್‌ಗಳನ್ನು ತೆರೆಯಲು ನಿರ್ಧರಿಸಲಾಗಿದೆ.

ಭಾರತೀಯ ರಿಸರ್ವ್ ಬ್ಯಾಂಕ್ (RBI) ಅನುಮೋದನೆಯಂತೆ ಸೆ.27ರಂದು ಸಾರ್ವಜನಿಕ ವಲಯದ ಬ್ಯಾಂಕ್‌ಗಳ ಎಲ್ಲ ಶಾಖೆಗಳು, ಕಚೇರಿಗಳು, ಎಟಿಎಂಗೆ ಸಂಬಂಧಿಸಿದ ಶಾಖೆಗಳು ಹಾಗೂ ಕರೆನ್ಸಿ ಚೆಸ್ಟ್‌ಗಳು ಕಾರ್ಯನಿರ್ವಹಿಸಲಿವೆ. 2ನೇ ಪುಟಕ್ಕೆ...

# ಕಂದಾಯ ಇಲಾಖೆಯಲ್ಲಿ ಸಾರ್ವಜನಿಕ ಸಂಪರ್ಕಾಧಿಕಾರಿ ನೇಮಕ

● ವಿಕ್ರಮ ವಾಹಿನಿ । ಬೆಂಗಳೂರು

**ಗ್ರಾಮೀಣ ಜನರು ಪಿಂಚಣಿ ಹಾಗೂ ಕಂದಾಯ ಸೇವೆಗಳನ್ನು ಪಡೆಯುವಾಗ ಎದುರಿಸುವ ತೊಂದರೆ ನಿವಾರಿಸಲು ರಾಜ್ಯ ಸರ್ಕಾರ ಮಹತ್ವದ ಕ್ರಮ ಕೈಗೊಂಡಿದೆ. ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಶಿಫಾರಸ್ಸಿನಂತೆ ವಿವಿಧ ಹಂತದ ಕಂದಾಯ ಕಚೇರಿಗಳಲ್ಲಿ ತಹಶೀಲ್ದಾರ್ ಗ್ರೇಡ್-2 ಅಧಿಕಾರಿಗಳನ್ನು ಸಾರ್ವಜನಿಕ ಸಂಪರ್ಕಾಧಿಕಾರಿಗಳಾಗಿ ನೇಮಿಸಲು ಆದೇಶಿಸಲಾಗಿದೆ. ಇದರಿಂದ ಜನರಿಗೆ ನೇರವಾಗಿ ಸೇವೆ ಹಾಗೂ ಮಾರ್ಗದರ್ಶನ ದೊರೆಯಲಿದ್ದು, ಮಧ್ಯವರ್ತಿಗಳ ಹಸ್ತಕ್ಷೇಪ ಕಡಿಮೆಯಾಗುವ ನಿರೀಕ್ಷೆಯಿದೆ.**

ಗ್ರಾಮೀಣ ಜನರು ಕಂದಾಯ ಇಲಾಖೆಯ ಸೇವೆಗಳನ್ನು ಪಡೆಯುವ ಸಂದರ್ಭದಲ್ಲಿ ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮಹತ್ವದ ಆಡಳಿತಾತ್ಮಕ ಕ್ರಮ ಕೈಗೊಂಡಿದೆ. ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಶಿಫಾರಸ್ಸಿನಂತೆ, ತಾಲೂಕು, ಉಪವಿಭಾಗಾಧಿಕಾರಿ, ಜಿಲ್ಲಾಧಿಕಾರಿ ಹಾಗೂ ಪ್ರಾದೇಶಿಕ ಆಯುಕ್ತರ ಕಚೇರಿಗಳಲ್ಲಿ ತಹಶೀಲ್ದಾರ್ ಗ್ರೇಡ್-2 ಅಧಿಕಾರಿಗಳನ್ನು ಸಾರ್ವಜನಿಕ ಸಂಪರ್ಕಾಧಿಕಾರಿಗಳಾಗಿ ನೇಮಿಸಲು ಆದೇಶಿಸಲಾಗಿದೆ.

**ಮಧ್ಯವರ್ತಿಗಳ ಅವಲಂಬನೆಗೆ ಕಡಿವಾಣ:** ಗ್ರಾಮೀಣ ಪ್ರದೇಶಗಳಲ್ಲಿ, ವಿಶೇಷವಾಗಿ ಅನಕ್ಷರಸ್ಥರು ಪಿಂಚಣಿ ಸೇರಿದಂತೆ ಕಂದಾಯ ಇಲಾಖೆಯ ವಿವಿಧ ಸೇವೆಗಳನ್ನು ಪಡೆಯಲು ಮಧ್ಯವರ್ತಿಗಳ ನೆರವು ಪಡೆಯಬೇಕಾದ ಪರಿಸ್ಥಿತಿ ಇದೆ. ಇದರಿಂದ ಕೆಲ ಸಂದರ್ಭಗಳಲ್ಲಿ ಸಾರ್ವಜನಿಕರು ತಮ್ಮ ಹಕ್ಕಿನ ಸೇವೆಗಳನ್ನು ಪಡೆಯಲು ತೊಂದರೆ ಅನುಭವಿಸುತ್ತಿರುವುದಲ್ಲದೆ, ಮಧ್ಯವರ್ತಿಗಳ ದುರುಪಯೋಗಕ್ಕೂ ಒಳಗಾಗುತ್ತಿದ್ದಾರೆ ಎಂಬ ದೂರುಗಳಿವೆ. ಈ ಹಿನ್ನೆಲೆಯಲ್ಲಿ ಹುದ್ದೆಗಳ ನೇಮಕದಿಂದ ಸಾರ್ವಜನಿಕರು ನೇರವಾಗಿ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಿ ತಮ್ಮ ಸಮಸ್ಯೆಗಳಿಗೆ ಪರಿಹಾರ ಪಡೆಯಲು ಅವಕಾಶ ದೊರೆಯಲಿದೆ.

**ಸೇವೆಗಳ ಕುರಿತು ಮಾರ್ಗದರ್ಶನ:** ಪಿಂಚಣಿ, ಕಂದಾಯ ದಾಖಲೆಗಳು ಸೇರಿದಂತೆ ವಿವಿಧ ಸರ್ಕಾರಿ ಸೇವೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಗೆ ಅಗತ್ಯ ಮಾಹಿತಿ ಹಾಗೂ ಮಾರ್ಗದರ್ಶನ ನೀಡುವುದು ಸಾರ್ವಜನಿಕ ಸಂಪರ್ಕಾಧಿಕಾರಿಗಳ ಪ್ರಮುಖ ಜವಾಬ್ದಾರಿಯಾಗಲಿದೆ. ಅರ್ಜಿ ಸಲ್ಲಿಕೆ, ದಾಖಲೆಗಳ ಪರಿಶೀಲನೆ ಹಾಗೂ ಸೇವೆ ಪಡೆಯುವ ಪ್ರಕ್ರಿಯೆ ಕುರಿತು ಜನರಿಗೆ ಸೂಕ್ತ ಮಾಹಿತಿ ಒದಗಿಸುವ ಮೂಲಕ ಕಚೇರಿಗಳಲ್ಲಿ ಅನಗತ್ಯ ಅಲೆದಾಟ ತಪ್ಪಿಸಲು ಕ್ರಮ ಕೈಗೊಳ್ಳಬಹುದಾಗಿದೆ.

**ಮಾನವ ಹಕ್ಕುಗಳ ರಕ್ಷಣೆಗೆ ಒತ್ತು:** ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಶಿಫಾರಸ್ಸಿನ ಅನುಷ್ಠಾನದ ಭಾಗವಾಗಿ ಕೈಗೊಂಡಿರುವ ಈ ಕ್ರಮವು ಜನಸಾಮಾನ್ಯರು ತಮ್ಮ ಹಕ್ಕಿನ ಸರ್ಕಾರಿ ಸೇವೆಗಳನ್ನು ಸುಲಭವಾಗಿ ಪಡೆಯಲು ನೆರವಾಗಲಿದೆ. ಅಧಿಕಾರಿಗಳು ಮತ್ತು ಸಾರ್ವಜನಿಕರ ನಡುವೆ ನೇರ ಸಂಪರ್ಕ ಕಲ್ಪಿಸುವ ಮೂಲಕ ಸಮಸ್ಯೆಗಳನ್ನು ತ್ವರಿತವಾಗಿ ಸಂಬಂಧಪಟ್ಟವರ ಗಮನಕ್ಕೆ ತಂದು ಪರಿಹರಿಸುವ ವ್ಯವಸ್ಥೆ ಬಲಪಡಿಸುವ ಉದ್ದೇಶ ಹೊಂದಿದೆ.

**ಪಾರದರ್ಶಕ ಆಡಳಿತಕ್ಕೆ ಆದ್ಯತೆ:** ಕಂದಾಯ ಇಲಾಖೆಯ ಸೇವೆಗಳಲ್ಲಿ ಪಾರದರ್ಶಕತೆ ಹೆಚ್ಚಿಸುವುದು ಹಾಗೂ ಮಧ್ಯವರ್ತಿಗಳ ಹಸ್ತಕ್ಷೇಪ ಕಡಿಮೆ ಮಾಡುವ ನಿಟ್ಟಿನಲ್ಲಿ ಹುದ್ದೆಗಳ ನೇಮಕ ಪ್ರಮುಖ ಹೆಜ್ಜೆಯಾಗಿದೆ. ಗ್ರಾಮೀಣ ಭಾಗದ ಜನರು ತಮ್ಮ ಸಮಸ್ಯೆಗಳನ್ನು ನೇರವಾಗಿ ಅಧಿಕಾರಿಗಳ ಮುಂದೆ ಮಂಡಿಸಲು ಅವಕಾಶ ದೊರೆಯುವುದರಿಂದ, ಸರ್ಕಾರಿ ಸೇವೆಗಳನ್ನು ಜನರ ಮನೆಬಾಗಿಲಿಗೆ ಮತ್ತಷ್ಟು ಹತ್ತಿರ ತರುವ ಪ್ರಯತ್ನವಾಗಿದೆ.

ಜನರ ಸಮಸ್ಯೆಗಳನ್ನು ನೇರವಾಗಿ ಆಲಿಸಿ, ಅವರ ಹಕ್ಕಿನ ಸೇವೆಗಳನ್ನು ಸುಲಭವಾಗಿ ದೊರಕುವಂತೆ ಮಾಡುವ ವ್ಯವಸ್ಥೆ ಬಲಪಡಿಸುವುದು ಈ ಕ್ರಮದ ಉದ್ದೇಶವಾಗಿದೆ. ಇದರಿಂದ ಕಂದಾಯ ಇಲಾಖೆಯ ಕಾರ್ಯವೈಖರಿಯಲ್ಲಿ ಸಾರ್ವಜನಿಕರೊಂದಿಗೆ ನೇರ ಸಂಪರ್ಕ, ಹೊಣೆಗಾರಿಕೆ ಮತ್ತು ಪಾರದರ್ಶಕತೆಗೆ ಹೆಚ್ಚಿನ ಆದ್ಯತೆ ದೊರೆಯುವ ನಿರೀಕ್ಷೆಯಿದೆ.

■ ಸುದ್ದಿ ಚುಟುಕು

## 'ಆ ಮೆಂಟಲ್ ಬಗ್ಗೆ ನನ್ನ ಕೇಳಬೇಡ್ರಿ'



● ವಿಕ್ರಮ ವಾಹಿನಿ । ಮೈಸೂರು

ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ಅವರು ತಮ್ಮ ವಿರುದ್ಧ ಅವಹೇಳನಕಾರಿ ಪದಗಳನ್ನು ಬಳಸಿರುವುದಕ್ಕೆ ಮಾಜಿ ಸಂಸದ ಪ್ರತಾಪ್ ಸಿಂಹ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಪ್ರದೀಪ್ ಈಶ್ವರ್ ಅವರ ಹೇಳಿಕೆಗಳ ಬಗ್ಗೆ ನನ್ನನ್ನು ಪ್ರಶ್ನಿಸಬೇಡಿ. ಪ್ರತಿದಿನ ಅವರ ಬಳಿ ಮೈಕ್ ಹಿಡಿದುಕೊಂಡು ಹೋಗಿ ನನ್ನ ಬಗ್ಗೆ ಮಾತನಾಡಿಸುವುದೇಕೆ?" ಎಂದು ಮಾಧ್ಯಮಗಳನ್ನೂ ಪ್ರಶ್ನಿಸಿದರು. ತಮ್ಮ ವಿರುದ್ಧ ಇಂತಹ ಪದಗಳನ್ನು ಬಳಸಬಾರದು ಎಂದು ನ್ಯಾಯಾಲಯ ಸೂಚಿಸಿರುವುದಾಗಿ ಹೇಳಿದ ಅವರು, ಈ ವಿಷಯಕ್ಕೆ ಸಂಬಂಧಿಸಿದಂತೆ ತಮ್ಮ ಹೇಳಿಕೆಯನ್ನು ಪ್ರಕಟಿಸದಂತೆ ಮಾಧ್ಯಮಗಳಿಗೆ ಮನವಿ ಮಾಡಿದರು.

"ಸಮಾಜದ ವಿಚಾರವಂತರು ಹಾಗೂ ಸಜ್ಜನರ ಬಗ್ಗೆ ಪ್ರಶ್ನಿಸಿದರೆ ನಾನು ಉತ್ತರಿಸುತ್ತೇನೆ. ಟೀಕೆ, ತರ್ಕ ಸಹಜ. ಆದರೆ ವೈಯಕ್ತಿಕ ನಿಂದನೆಗಳ ಬಗ್ಗೆ ನನ್ನನ್ನು ಕೇಳಬೇಡಿ" ಎಂದು ಪ್ರತಾಪ್ ಸಿಂಹ ಹೇಳಿದರು. ಪ್ರದೀಪ್ ಈಶ್ವರ್ ಹೇಳಿಕೆ: ಇತ್ತೀಚೆಗೆ ಪ್ರತಾಪ್ ಸಿಂಹ ವಿರುದ್ಧ ವಾಗ್ದಾಳಿ ನಡೆಸಿದ್ದ ಶಾಸಕ ಪ್ರದೀಪ್ ಈಶ್ವರ್, ಅವರ ವಿರುದ್ಧ ಏಕವಚನದಲ್ಲಿ ಮಾತನಾಡಿ ಹಲವು ಆರೋಪಗಳನ್ನು ಮಾಡಿದ್ದರು. ಧರ್ಮ ಹಾಗೂ ಸಮುದಾಯಕ್ಕೆ ಸಂಬಂಧಿಸಿದ ವಿಚಾರಗಳನ್ನೂ ಪ್ರಸ್ತಾಪಿಸಿ ಟೀಕಿಸಿದ್ದರು.

ಇದೇ ವೇಳೆ, ವೈಯಕ್ತಿಕ ಟೀಕೆಗಳಿಗೆ ಪ್ರತಿಕ್ರಿಯಿಸದೆ ಸಾರ್ವಜನಿಕ ವಿಚಾರಗಳ ಕುರಿತು ಮಾತ್ರ ಮಾತನಾಡುವುದಾಗಿ ಪ್ರತಾಪ್ ಸಿಂಹ ಸ್ಪಷ್ಟಪಡಿಸಿದರು.

## 'ಮಂಡಿಯೂರಿ ಶರಣಾಗುವುದಿಲ್ಲ': ಪೆಜೆಶ್ಕಿಯನ್

● ವಿಕ್ರಮ ವಾಹಿನಿ । ಇರಾನ್

ಅಮೆರಿಕದ ಬೆದರಿಕೆಗೆ ಇರಾನ್ ಮಂಡಿಯೂರಿ ಶರಣಾಗುವುದಿಲ್ಲ ಎಂದು ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಬುಧವಾರ ಹೇಳಿದ್ದಾರೆ. ಅಮೆರಿಕ ಮತ್ತು ಇಸ್ರೇಲ್ ದಾಳಿಗಳನ್ನು ಖಂಡಿಸಿದ ಅವರು, ಇರಾನ್ ತನ್ನನ್ನು ರಕ್ಷಿಸಿಕೊಂಡಿದೆ ಎಂದು ಪ್ರತಿಪಾದಿಸಿದರು.

ಯುದ್ಧದ ವೇಳೆ ಮೃತಪಟ್ಟ ಇರಾನ್‌ನ ಸರ್ವೋಚ್ಚ ನಾಯಕ ಅಲಿ ಖಮೇನಿ ಹಾಗೂ 150ಕ್ಕೂ ಹೆಚ್ಚು ಶಾಲಾ ಮಕ್ಕಳ ಚಿತ್ರಗಳನ್ನು ಪ್ರದರ್ಶಿಸಿದ ಪೆಜೆಶ್ಕಿಯನ್, ತಮ್ಮ ಜನರು ದಾಳಿಗಳ ಸಂತ್ರಸ್ತರಾಗಿದ್ದಾರೆ ಎಂದು ಹೇಳಿದರು. ಬೆದರಿಕೆಗಳು ಇರಾನ್‌ನ ಸಂಕಲ್ಪವನ್ನು ಮತ್ತಷ್ಟು ಗಟ್ಟಿಗೊಳಿಸುತ್ತವೆ ಎಂದ ಅವರು, ಸಂಘರ್ಷಕ್ಕೆ ರಾಜತಾಂತ್ರಿಕ ಪರಿಹಾರದ ಬಾಗಿಲು ತೆರೆದಿರುವುದಾಗಿ ತಿಳಿಸಿದರು. ಇದಕ್ಕೂ ಮುನ್ನ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಶಾಂತಿ ಒಪ್ಪಂದ ಏರ್ಪಡದಿದ್ದರೆ ಇರಾನ್ ಅನ್ನು 'ಸಂಪೂರ್ಣವಾಗಿ ನಾಶಪಡಿಸುವ' ಆಯ್ಕೆಯಿದೆ ಎಂದು ವಿಶ್ವಸಂಸ್ಥೆಯ ವೇದಿಕೆಯಲ್ಲಿ ಎಚ್ಚರಿಸಿದ್ದರು. ಬಳಿಕ ಅಮೆರಿಕ ಮತ್ತು ಇರಾನ್ ಪ್ರತಿನಿಧಿಗಳು ಮಾತುಕತೆ ನಡೆಸಿರುವುದಾಗಿ ಟ್ರಂಪ್ ತಿಳಿಸಿದ್ದಾರೆ.

## ಮಾಫಿ ಸಾಕ್ಷಿ ಆದೇಶ ಪ್ರಶ್ನಿಸಿದ್ದ ವಿಜಯಲಕ್ಷ್ಮಿ ಅರ್ಜಿ ವಜಾ

● ವಿಕ್ರಮ ವಾಹಿನಿ । ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಆರೋಪಿ ಪ್ರದೋಷ್ ರಾವ್ ಅವರನ್ನು ಮಾಫಿ ಸಾಕ್ಷಿಯನ್ನಾಗಿ ಮಾಡಲು 59ನೇ ಸಿಸಿಹೆಚ್ ನ್ಯಾಯಾಲಯ ನೀಡಿದ್ದ ಆದೇಶ ಪ್ರಶ್ನಿಸಿ ನಟ ದರ್ಶನ್ ಅವರ ಪತ್ನಿ ವಿಜಯಲಕ್ಷ್ಮಿ ಸಲ್ಲಿಸಿದ್ದ ರಿಟ್ ಅರ್ಜಿಯನ್ನು ಹೈಕೋರ್ಟ್ ಬುಧವಾರ ವಜಾಗೊಳಿಸಿದೆ.

ನ್ಯಾಯಮೂರ್ತಿ ವಿ. ಶ್ರೀಶಾನಂದ ಅವರಿದ್ದ ಪೀಠ, ವಿಚಾರಣೆ ವೇಳೆ ಪ್ರದೋಷ್ ಅವರನ್ನು ಪ್ರತಿಪ್ರಶ್ನೆಗೆ ಒಳಪಡಿಸುವ ಅವಕಾಶ ಆರೋಪಿಗಳಿಗೆ ಇರುವುದರಿಂದ ವಿಚಾರಣಾ ನ್ಯಾಯಾಲಯದ ಆದೇಶದಲ್ಲಿ ಹಸ್ತಕ್ಷೇಪ ಅಗತ್ಯವಿಲ್ಲ ಎಂದು ತಿಳಿಸಿ, ಮಾಫಿ ಸಾಕ್ಷಿ ಆದೇಶವನ್ನು ಎತ್ತಿಹಿಡಿದಿದೆ. ಪ್ರದೋಷ್ 14ನೇ ಆರೋಪಿಯಾಗಿದ್ದು, ಅವರ ಮಾಫಿ ಸಾಕ್ಷಿ ಅರ್ಜಿ ವಿಚಾರಣಾ ನ್ಯಾಯಾಲಯದಲ್ಲಿ ಅಂಗೀಕಾರವಾಗಿತ್ತು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ಸವಿ ವಾಹಿನಿ

ಉತ್ತಮರ ಸಂಪರ್ಕದಿಂದ "ಪರಿವರ್ತನೆ" ಸಾಧ್ಯ... "ಉತ್ತಮರ ಮಾರ್ಗದರ್ಶನ "ಜೀವನದುದ್ದಕ್ಕೂ ಒಳ್ಳೆಯ 'ದಿಕ್ಸೂಚಿಯಂತೆ' ದಾರಿ ತೋರುತ್ತದೆ".

### ದಿನ ಪಂಚಾಂಗ

ಸೆಪ್ಟಂಬರ್, 24-2026, ಗುರುವಾರ ವರ್ಷ ಋತು,
ಭಾದ್ರಪದ ಮಾಸ, ಶುದ್ಧ ಪಕ್ಷ
ತ್ರಯೋದಶಿ ತಿಥಿ ರಾ.9:52
ಧನಿಷ್ಠ ನಕ್ಷತ್ರ ಬೆ.10:12
ರಾಹುಕಾಲ ಮ 1:43-3:13
ಪ್ರದೋಷ, ನಾರಾಯಣಗುರು ಪುಣ್ಯದಿನ, ಅಂ. ಹಾನಗಲ್ಲ ಕುಮಾರಸ್ವಾಮಿ ಜಯಂತಿ, ಶ್ರೀಶೈಲ ಜಗದ್ಗುರು ವಾಗೀಶ ಪಂಡಿತಾರಾಧ್ಯ ಸ್ವಾಮಿ ಪುಣ್ಯದಿನ, ಮಾಡಾಳುಗ್ರಾಮ ಶ್ರೀ ಗೌರಮ್ಮದೇವಿ ವಿಸರ್ಜನೆ, ಹುಲಿಕಲ್ಲು ಉತ್ಸವ, ಸೌಂದತ್ತಿ ದೀಕ್ಷಿತರ ಪುಣ್ಯದಿನ

### ಆಧ್ಯಾತ್ಮ

## 'ಹಳತಾದ ತುಪ್ಪ ಮಹೌಷಧ: ಅವಧಿಯಿಲ್ಲದ ಅಮೃತ'



● ವಿಕ್ರಮ ವಾಹಿನಿ । ಗೋಕರ್ಣ

ತುಪ್ಪದ ಬೆಲೆ ಸಮಾಜಕ್ಕೆ ತಿಳಿದಿಲ್ಲ. ಪುರಾಣ ಘೃತ, ಮಹಾಘೃತಗಳಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಇವುಗಳ ಮೌಲ್ಯ ಸಮಾಜಕ್ಕೆ ಗೊತ್ತಾದರೆ ಬಹುಶಃ ಇವುಗಳಿಗೆ ಬಿಗಿ ಭದ್ರತೆಯನ್ನು ಒದಗಿಸುವ ಸಂದರ್ಭ ಬರಬಹುದು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 23.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಹತ್ತು ವರ್ಷ ಹಳೆಯದಾದ ತುಪ್ಪವನ್ನು ಪುರಾಣ ಘೃತ, ಹತ್ತು ವರ್ಷದ ನಂತರದ ತುಪ್ಪವನ್ನು ಪ್ರಪುರಾಣ ಘೃತ, ನೂರು ವರ್ಷದ ತುಪ್ಪವನ್ನು ಕುಂಭ ಸರ್ಪಿ, ಮಹಾಘೃತ ಎಂದು ಕರೆಯಲಾಗಿದ್ದು, ಇವುಗಳು ಮಹೌಷಧವಾಗಿ ಕಾರ್ಯ ನಿರ್ವಹಿಸುತ್ತವೆ. ಯೋಗರತ್ನಾಕರವು ಮಹಾಘೃತದ ಕುರಿತಾಗಿ ಹೇಳುತ್ತಾ ಇದಕ್ಕೆ ಭೂತೋಚ್ಚಾಟನೆ ಮಾಡುವ ದೈವೀಶಕ್ತಿಯೂ ಇದೆ ಎಂಬುದನ್ನು ಉಲ್ಲೇಖಿಸಿದೆ. ತುಪ್ಪದ ಗುಣಗಳನ್ನು ಹೇಳಿ ಮುಗಿಯುವುದಲ್ಲ ಎಂದರು.

ಕ್ಷೀರ ಕುಟುಂಬದ ವಿವಿಧ ಪದಾರ್ಥಗಳ ಆಯಸ್ಸು ಸಂಸ್ಕಾರವಾದಂತೆ ಹೆಚ್ಚುತ್ತಾ ಹೋಗುತ್ತದೆ. ಹಾಲು, ಮೊಸರು, ಬೆಣ್ಣೆಗಳ ಆಯಸ್ಸು ಸೀಮಿತ ಅವಧಿಯಾದರೆ, ತುಪ್ಪದ ಆಯಸ್ಸು ಅದು ಮುಗಿಯದ ಆಯಸ್ಸು. ತುಪ್ಪಕ್ಕೆ ಅವಧಿ ಮುಕ್ತಾಯ (expiry) ಎಂಬುದೇ ಇಲ್ಲ. ಹಳತಾದಂತೆ ಅದರ ಗುಣ ಹೆಚ್ಚುತ್ತಾ ಹೋಗುತ್ತದೆ. ಹಾಲೇ ತುಪ್ಪದ ಮೂಲವಾದರೂ, ಹಾಲಿಗಿಂತ ಎಷ್ಟೋ ಪಾಲು ಗುಣದ ವೃದ್ಧಿಯನ್ನು ತುಪ್ಪದಲ್ಲಿ ಕಾಣಬಹುದು. ಹಾಗಾಗಿ ತುಪ್ಪ ಹಾಲಿನ ಕುಟುಂಬದ ಚಕ್ರವರ್ತಿ ಎಂದು ಅಭಿಪ್ರಾಯಪಟ್ಟರು.

ಪನ್ನೀರಿಗೆ ಆಯುರ್ವೇದದಲ್ಲಿ ಕಿಲಾಟ ಎನ್ನಲಾಗಿದೆ. ಪನ್ನೀರು ಇಂದಿನ ಜಗತ್ತಿನಲ್ಲಿ ಬಹುಜನಪ್ರಿಯವಾಗಿದ್ದು, ಇದನ್ನು ಯಥೇಚ್ಛವಾಗಿ ಬಳಸುವ ಪ್ರವೃತ್ತಿ ಹೆಚ್ಚಾಗುತ್ತಿದೆ. ಹೆಚ್ಚಿನ ಸಂದರ್ಭಗಳಲ್ಲಿ ಇದು ಬಳಕೆಗೆ ಸೂಕ್ತವಲ್ಲ. ಇದು ಇಂದಿನ ಜಗತ್ತಿಗೆ ಪ್ರಿಯ ಆಹಾರ. ಆದರೆ ಇದು ಹಿತ ಆಹಾರವಲ್ಲ ಎಂದರು.

ದೇಹದಲ್ಲಿನ ಹಳೆಯ ಕೊಬ್ಬನ್ನು ತೆಗೆಯುವ ಸಾಮರ್ಥ್ಯ ತುಪ್ಪಕ್ಕಿದೆ. ಆಧುನಿಕರು ತುಪ್ಪದ ಬಗ್ಗೆ ಯಾವ ಅಭಿಪ್ರಾಯವನ್ನು ಹೊಂದಿದ್ದಾರೋ ಅದಕ್ಕೆ ತದ್ವಿರುದ್ಧವಾದ ಸ್ವಭಾವವನ್ನು ನಿಜವಾದ ತುಪ್ಪ ಹೊಂದಿದೆ. ತುಪ್ಪ ಕೊಲೆಸ್ಟ್ರಾಲ್ ಆಗಿ ದೇಹಕ್ಕೆ ಬಾಧಿಸುವುದಿಲ್ಲ. ಆದರೆ ದೇಹದಲ್ಲಿರುವ ಬೇಡದ ಕೊಬ್ಬನ್ನು ತುಪ್ಪ ತೆಗೆಯುತ್ತದೆ ಎಂದು ವಿವರಿಸಿದರು.

ತುಪ್ಪ ಯೋಗವಾಹಿಯಾಗಿದ್ದು, ಇನ್ನೊಂದು ದ್ರವ್ಯದ ಸಂಯೋಗವಾದಾಗ ತನ್ನ ಗುಣವನ್ನು ಬಿಡದೆಯೇ ವಿಶೇಷ ಕಾರ್ಯವನ್ನು ಮಾಡುವ ಸಾಮರ್ಥ್ಯ ತುಪ್ಪಕ್ಕಿದೆ. ಕಹಿಯಾದ ಪದಾರ್ಥವನ್ನು ತುಪ್ಪದ ಜೊತೆ ಸೇರಿಸಿದಾಗಲೂ, ತನ್ನ ಸಿಹಿಯನ್ನು ಬಿಟ್ಟುಕೊಡದೇ ಆ ಕಹಿಯನ್ನು ತುಪ್ಪ ಸ್ವೀಕರಿಸುತ್ತದೆ. ಪರಸ್ಪರ ವಿರುದ್ಧ ಗುಣದ ಪದಾರ್ಥವನ್ನು ಸೇರಿಸಿದಾಗಲೂ ತನ್ನ ಗುಣವನ್ನು ಬಿಟ್ಟುಕೊಡದ ಯೋಗ್ಯತೆ ತುಪ್ಪದ್ದು ಎಂದು ತುಪ್ಪದ ಮಹತಿಯನ್ನು ಹೇಳಿದರು.

ಸವದತ್ತಿಯ ಶ್ರೀಶ್ರೀ ಶಿವಾನಂದ ಸ್ವಾಮೀಜಿ ಶ್ರೀಗಳನ್ನು ಸಂದರ್ಶಿಸಿ, ಆಹಾರದ ವಿಚಾರವಾಗಿ ನಡೆಯುತ್ತಿರುವ ಚಾತುರ್ಮಾಸ್ಯದ ಕುರಿತಾಗಿ ಶ್ಲಾಘನೆ ವ್ಯಕ್ತಪಡಿಸಿದರು. ಅಂತಾರಾಷ್ಟ್ರೀಯ ಬ್ಯಾಡ್ಮಿಂಟನ್ ಆಟಗಾರ ಅರವಿಂದ್ ಭಟ್, ಉದ್ಯಮಿ ಮಧುಕರ ನರಸಿಂಹ ಹೆಗಡೆ, ಹಿರಿಯ ನ್ಯಾಯವಾದಿ ಗಣಪತಿ ಹೆಗಡೆ ದುವಾ, ಸರಸ್ವತಿ ಜಯರಾಮ ಕೂರ್ಸೆ ಉಪಸ್ಥಿತರಿದ್ದು, ಶ್ರೀಗಳಿಂದ ಆಶೀರ್ವಾದ ಪಡೆದರು. ವಿಷ್ಣು ಸಭಾಹಿತ ಉಡುಪಿ ಕುಟುಂಬದವರು ಗುರುಭಿಕ್ಷಾ ಸೇವೆ ಸಮರ್ಪಿಸಿದರು. ದಿನಪ್ರಧಾನರಾಗಿ ಶಿವರಾಮ ಭಟ್ಟ ಪೊನ್ನೂರುಕಜೆ ದಂಪತಿಗಳು ಉಪಸ್ಥಿತರಿದ್ದರು.

ಹಳ್ಳೇರು - ನಾಡವ ಸಮಾಜದಿಂದ ಸ್ವರ್ಣಪಾದುಕಾ ಪೂಜೆ: ಹಳ್ಳೇರು ಹಾಗೂ ನಾಡವ ಸಮಾಜಗಳಿಂದ ಸ್ವರ್ಣಪಾದುಕಾ ಪೂಜೆ ನಡೆಯಿತು. ಪರಂಪರಾಗತವಾಗಿ ಶ್ರೀರಾಮಚಂದ್ರಾಪುರ ಮಠಕ್ಕೆ ನಡೆದುಕೊಳ್ಳುತ್ತಿರುವ ಈ ಸಮಾಜದ ಭಕ್ತರನ್ನು ಶ್ರೀಗಳು ಆಶೀರ್ವದಿಸಿದರು. ಸಮಾಜದ ಪ್ರಮುಖರಾದ ಪ್ರದೀಪ್ ನಾಯಕ ದೇವರಬಾವಿ, ನಾಗರಾಜ್, ವೆಂಕಣರಮಣ ಹಳ್ಳೇರ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

# ಬರ ನಿರ್ವಹಣೆಗೆ ಹಣವಿಲ್ಲ: ಚೊಂಬು, ಚಿಪ್ಪು ಹಿಡಿದು ಬಿಜೆಪಿ, ಜೆಡಿಎಸ್‌ನಿಂದ ಪ್ರತಿಭಟನೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ಸರ್ಕಾರದ ಆರ್ಥಿಕ ನಿರ್ವಹಣೆಯನ್ನು ಪ್ರಶ್ನಿಸಿ ಪ್ರತಿಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಸದಸ್ಯರು ವಿಧಾನಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆ ಬಳಿ ಖಾಲಿ ಚೊಂಬು ಹಾಗೂ ತೆಂಗಿನಕಾಯಿ ಚಿಪ್ಪುಗಳನ್ನು ಪ್ರದರ್ಶಿಸಿ ಪ್ರತಿಭಟನೆ ನಡೆಸಿದರು.

ರಾಜ್ಯದ ಖಜಾನೆ ಖಾಲಿಯಾಗಿದೆ, ಸರ್ಕಾರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದೆ ಎಂದು ಆರೋಪಿಸಿದ ಪ್ರತಿಪಕ್ಷ ನಾಯಕರು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜೀ ನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಸಚಿವರಾದ ಸುನೀಲ್ ಕುಮಾರ್, ಎಸ್.ಸುರೇಶ್ ಕುಮಾರ್, ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಬಿಜೆಪಿ, ಜೆಡಿಎಸ್ ಸದಸ್ಯರು ಭಾಗವಹಿಸಿದ್ದರು. ಖಾಲಿ ಚೊಂಬುಗಳನ್ನು ಹಿಡಿದುಕೊಂಡು ಪ್ರತಿಭಟನಾಕಾರರು ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಆರ್ಥಿಕತೆ ನಿರ್ವಹಿಸುವಲ್ಲಿ ಸರ್ಕಾರ ವಿಫಲ, ಡಿಕೆಶಿ ವಿಫಲ, ಪಾಪರ್ ಸರ್ಕಾರ ಎಂಬ ಘೋಷಣೆಗಳೊಂದಿಗೆ ಆಕ್ರೋಶ ವ್ಯಕ್ತಪಡಿಸಿದರು.ಡಿ.ಕೆ.ಶಿವಕುಮಾರ್ ಅವರ ಘೋಷಣೆಗಳು ಬೋಗಸ್, ಅವರ ಸಂಪುಟವೂ ಬೋಗಸ್ ಸಂಪುಟ ಎಂದು ಪ್ರತಿಪಕ್ಷ ಸದಸ್ಯರು ಟೀಕಿಸಿದರು.

ಆರ್.ಅಶೋಕ್ ಮಾತನಾಡಿ, ಮುಖ್ಯ ಮಂತ್ರಿಯಾಗಿರುವ ಡಿ.ಕೆ.ಶಿವಕುಮಾರ್ ಅವರಿಗೆ ಆರ್ಥಿಕ ಇಲಾಖೆ ಮೇಲೆಯೇ ನಿಯಂತ್ರಣ ಇಲ್ಲ ಎಂದು ಆರೋಪಿಸಿದರು.ರಾಜ್ಯದ ಆರ್ಥಿಕತೆ ಹಳ್ಳ ಹಿಡಿದಿದ್ದು, ಸರ್ಕಾರ ಪಾಪರ್ ಆಗಿದೆ ಎಂದು ದೂರಿದ ಅವರು, ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ ಮನೆಗೆ ಹೋಗಬೇಕು ಎಂದು ಒತ್ತಾಯಿಸಿದರು. ವಿವಿಧ ಸಾಮಾಜಿಕ ಭದ್ರತಾ ಪಿಂಚಣಿಗಳನ್ನು ನೀಡಲು ಹಣದ ಸಮಸ್ಯೆ ಎದುರಾಗಿದೆ. ಶಿಕ್ಷಕರ ನೇಮಕಾತಿಗೂ ಆರ್ಥಿಕ ತೊಂದರೆ ಎದು ರಾಗಿದೆ. ಉದ್ಯೋಗ ನೀಡುವಲ್ಲಿಯೂ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು.



## ಬರದ ಹೊಡೆತಕ್ಕೆ ರೈತರ ಆತ್ಮಹತ್ಯೆ: ವಿಜಯೇಂದ್ರ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಬರ ಪರಿಸ್ಥಿತಿ ತೀವ್ರವಾಗಿದ್ದು, ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದು ಆತಂಕಕಾರಿ. ಸರ್ಕಾರ ತಕ್ಷಣ ರೈತರಿಗೆ ಪರಿಹಾರ ನೀಡಿ, ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸುವ ಜತೆಗೆ ಸಮರ್ಪಕ ವಿದ್ಯುತ್ ಪೂರೈಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.

ವಿಧಾನಸಭೆಯ ವಿಶೇಷ ಅಧಿವೇಶನದಲ್ಲಿ ಮಾತನಾಡಿದ ಅವರು, ಕಲಬುರಗಿಯಲ್ಲಿ 294, ಬೀದರ್‌ನಲ್ಲಿ 219, ರಾಯಚೂರಿನಲ್ಲಿ 161 ಹಾಗೂ ಕೊಪ್ಪಳದಲ್ಲಿ 82 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಹೇಳಿದರು. ಉತ್ತರ ಕರ್ನಾಟಕದ ಹಲವು ನೀರಾವರಿ ಯೋಜನೆಗಳು ವರ್ಷಗಳಿಂದ ಬಾಕಿ ಉಳಿದಿದ್ದು, ನವಲಿ ಸಮಾನಾಂತರ ಜಲಾಶಯ ಸೇರಿದಂತೆ ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದರು.

ಬೋರ್‌ವೆಲ್ ಮೂಲಕ ಬೆಳೆ ಉಳಿಸಿಕೊಳ್ಳಲು ಮುಂದಾಗಿರುವ ರೈತರಿಗೆ ಮೂರು ಹಂತದ ವಿದ್ಯುತ್ ಸಮರ್ಪಕವಾಗಿ ಸಿಗುತ್ತಿಲ್ಲ. ಬರದ ಮುನ್ಸೂಚನೆ ಇದ್ದರೂ ವಿದ್ಯುತ್ ಬೇಡಿಕೆಗೆ ಅನುಗುಣವಾಗಿ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳದ ಸರ್ಕಾರ ಈಗ ಹೆಚ್ಚಿನ ದರದಲ್ಲಿ ವಿದ್ಯುತ್ ಖರೀದಿಸುವ ಸ್ಥಿತಿಗೆ ಬಂದಿದೆ ಎಂದು ಆರೋಪಿಸಿದರು.

ಎಸ್‌ಡಿಆರ್‌ಎಫ್‌ನಲ್ಲಿ ಅನುಮೋದನೆಯಾದ ರೂ 1,229 ಕೋಟಿಯಲ್ಲಿ ರೂ 187 ಕೋಟಿ ಮಾತ್ರ ಬಳಕೆಯಾಗಿದ್ದು, ರಾಜ್ಯದ ಸುಮಾರು ಶೇ.45ರಷ್ಟು ಮಳೆಮಾಪಕಗಳು ಕಾರ್ಯನಿರ್ವಹಿಸುತ್ತಿಲ್ಲ ಎಂದು ವಿಜಯೇಂದ್ರ ಹೇಳಿದರು. ವಿಪತ್ತು ನಿರ್ವಹಣಾ ವ್ಯವಸ್ಥೆಯಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡಬೇಕು ಎಂದರು.

ಬರದಿಂದ ಸಂಕಷ್ಟದಲ್ಲಿರುವ ತಾಲೂಕುಗಳನ್ನು ವಾಸ್ತವಿಕ ಪರಿಸ್ಥಿತಿ ಆಧರಿಸಿ ಬರಪೀಡಿತವೆಂದು ಘೋಷಿಸಬೇಕು. ಬಾಕಿ ಇರುವ ಹಾಲಿನ ಪ್ರೋತ್ಸಾಹಧನವನ್ನು ಬಿಡುಗಡೆ ಮಾಡಿ, ಪ್ರತಿ ಲೀಟರ್‌ಗೆ ನೀಡುತ್ತಿರುವ ರೂ 5ರ ಪ್ರೋತ್ಸಾಹ ಧನವನ್ನು ರೂ 8ಕ್ಕೆ ಹೆಚ್ಚಿಸಬೇಕು.

ರೈತರ ಆತ್ಮಹತ್ಯೆ ತಡೆಯಲು ತುರ್ತು ಪರಿಹಾರ, ವಿದ್ಯುತ್ ಪೂರೈಕೆ ಹಾಗೂ ನೀರಾವರಿ ಯೋಜನೆಗಳಿಗೆ ಸರ್ಕಾರ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

## ರಾಜ್ಯದ ಆರ್ಥಿಕ ಪರಿಸ್ಥಿತಿ ಕುರಿತು ಶ್ವೇತಪತ್ರಕ್ಕೆ ವಿಜಯೇಂದ್ರ ಆಗ್ರಹ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಆರ್ಥಿಕ ಪರಿಸ್ಥಿತಿ ಕುರಿತು ಮುಖ್ಯಮಂತ್ರಿ ಶ್ವೇತಪತ್ರ ಹೊರಡಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದರು. ವಿಧಾನಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆ ಬಳಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ರೂ 4 ಲಕ್ಷ ಕೋಟಿಗೂ ಹೆಚ್ಚು ಹೊಸ ಸಾಲ ಮಾಡಿದ್ದು, ಒಟ್ಟಾರೆ ಸಾಲದ ಪ್ರಮಾಣ ರೂ 8 ಲಕ್ಷ ಕೋಟಿಗೆ ತಲುಪಿದೆ ಎಂದು ಆರೋಪಿಸಿದರು. ಸಾಲ ಮಾಡುತ್ತಿರುವುದನ್ನು ಹೊರತುಪಡಿಸಿ ರಾಜ್ಯದಲ್ಲಿ ನಿರೀಕ್ಷಿತ ಅಭಿವೃದ್ಧಿ ಕಾಣುತ್ತಿಲ್ಲ ಎಂದರು.

ರಾಜ್ಯ ಖಜಾನೆಯಲ್ಲಿ ಹಣವಿಲ್ಲದಿದ್ದರೂ ಸರ್ಕಾರ ರೂ 32 ಸಾವಿರ ಕೋಟಿ, ರೂ 10 ಸಾವಿರ ಕೋಟಿ ಸೇರಿದಂತೆ ವಿವಿಧ ಘೋಷಣೆಗಳನ್ನು ಮಾಡುತ್ತಿದೆ. ಹಣಕಾಸು ಇಲಾಖೆ ಹೊಸ ಘೋಷಣೆಗಳನ್ನು ಮಾಡದಂತೆ ಮುಖ್ಯಮಂತ್ರಿಗಳಿಗೆ ಸೂಚಿಸಿದೆ ಎಂದು ವಿಜಯೇಂದ್ರ ಹೇಳಿದರು.

ಬರ ಪರಿಹಾರ, ರೈತರು ಹಾಗೂ ಬಡವರಿಗೆ ನೆರವು ನೀಡಲೂ ಹಣದ ಕೊರತೆಯಿದೆ ಎಂದು ಆರೋಪಿಸಿದರು.

ವಿಕಲಚೇತನ, ವೃದ್ಧಾಪ್ಯ ಮತ್ತು ವಿಧವಾ ಪಿಂಚಣಿ ಸೇರಿದಂತೆ ವಿವಿಧ ಸೌಲಭ್ಯಗಳ ಪಾವತಿಯಲ್ಲಿ ಸಮಸ್ಯೆಯಾಗಿದೆ. ಶಿಕ್ಷಕರ ನೇಮಕಾತಿ ಹಾಗೂ ವೇತನ ಪಾವತಿಗೂ ಹಣಕಾಸಿನ ತೊಂದರೆ ಎದುರಾಗಿದೆ ಎಂದು ಅವರು ಹೇಳಿದರು.

ವಿಶೇಷ ಅಧಿವೇಶನದಲ್ಲಿ ಕೇಂದ್ರದ ಮೇಲೆ ಆರೋಪ ಮಾಡುವ ಬದಲು ರಾಜ್ಯದ ನೈಜ ಆರ್ಥಿಕ ಪರಿಸ್ಥಿತಿಯನ್ನು ಜನರಿಗೆ ತಿಳಿಸಬೇಕು. ಜಾಹೀರಾತುಗಳ ಮೂಲಕ ಸರ್ಕಾರದ ಸಾಧನೆ ಬಿಂಬಿಸುವ ಬದಲು ಹಣಕಾಸಿನ ಸ್ಥಿತಿಗತಿ ಕುರಿತು ಶ್ವೇತಪತ್ರ ಹೊರಡಿಸಿ ವಾಸ್ತವಾಂಶಗಳನ್ನು ಬಹಿರಂಗಪಡಿಸಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಶಾಸಕರು ಹಾಗೂ ವಿಧಾನಪರಿಷತ್ ಸದಸ್ಯರು ಉಪಸ್ಥಿತರಿದ್ದರು.

## ಅಕ್ರಮ ಔಷಧ ಮಾರಾಟ, ಸ್ವಯಂ ಚಿಕಿತ್ಸೆಗೆ ಕಡಿವಾಣ

● ವಿಕ್ರಮ ವಾಹಿನಿ । ಬೆಂಗಳೂರು

ಅಕ್ರಮ ಔಷಧ ಮಾರಾಟ, ಸ್ವಯಂ ಚಿಕಿತ್ಸೆ ಹಾಗೂ ಆಂಟಿಬಯೋಟಿಕ್‌ಗಳ ಅತಿಯಾದ ಬಳಕೆಗೆ ಕಡಿವಾಣ ಹಾಕಲು ಕೇಂದ್ರ ಔಷಧ ಗುಣಮಟ್ಟ ನಿಯಂತ್ರಣ ಸಂಸ್ಥೆ (ಸಿಡಿಎಸ್‌ಸಿಒ) ಹೊಸ ಸಲಹಾ ಮಾರ್ಗಸೂಚಿ ಹೊರಡಿಸಿದೆ.

ಆಂಟಿಬಯೋಟಿಕ್‌ಗಳು ಮತ್ತು ನೋವು ನಿವಾರಕ ಔಷಧಿಗಳ ಅಸಮರ್ಪಕ ಬಳಕೆಯಿಂದ ದೀರ್ಘಕಾಲೀನ ಕಿಡ್ನಿ ಕಾಯಿಲೆ ಸೇರಿದಂತೆ ಗಂಭೀರ ಆರೋಗ್ಯ ಸಮಸ್ಯೆಗಳು ಉಂಟಾಗುವ ಸಾಧ್ಯತೆಯಿದೆ ಎಂದು ಸಂಸ್ಥೆ ಎಚ್ಚರಿಸಿದೆ. ವೈದ್ಯರು, ಫಾರ್ಮಸಿಸ್ಟ್‌ಗಳು, ಔಷಧ ಮಾರಾಟಗಾರರು, ವಿತರಕರು ಹಾಗೂ ಆರೋಗ್ಯ ಸಂಸ್ಥೆಗಳು ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಲಾಗಿದೆ.

ರೋಗಿಯ ವಯಸ್ಸು, ಕಾಯಿಲೆಯ ಸ್ವರೂಪ, ಇತರ ಆರೋಗ್ಯ ಸಮಸ್ಯೆಗಳು ಹಾಗೂ ಈಗಾಗಲೇ ಪಡೆಯುತ್ತಿರುವ ಔಷಧಿಗಳನ್ನು ಪರಿಗಣಿಸಿ ಮಾತ್ರ ಆಂಟಿಬಯೋಟಿಕ್ ಅಥವಾ ನೋವು ನಿವಾರಕಗಳನ್ನು ಸೂಚಿಸಬೇಕು. ಅಗತ್ಯವಿರುವ ಪ್ರಮಾಣ ಹಾಗೂ ಅವಧಿಗೆ ಮಾತ್ರ ಔಷಧಿ ಬಳಸುವಂತೆ ವೈದ್ಯರಿಗೆ ಸೂಚಿಸಲಾಗಿದೆ.

ಪ್ರಿಸ್ಕ್ರಿಪ್ಶನ್ ಇಲ್ಲದೆ ಮಾರಾಟ ಬೇಡ

ಶೆಡ್ಯೂಲ್ ಎಚ್, ಎಚ್1 ಸೇರಿದಂತೆ ವೈದ್ಯರ ಪ್ರಿಸ್ಕ್ರಿಪ್ಶನ್ ಅಗತ್ಯವಿರುವ ಔಷಧಿಗಳನ್ನು ನಿಯಮ ಉಲ್ಲಂಘಿಸಿ ಚಿಲ್ಲರೆ ಮಾರಾಟ ಮಾಡಬಾರದು. ಫಾರ್ಮಸಿಸ್ಟ್‌ಗಳು ಹಾಗೂ ರಿಟೈಲರ್‌ಗಳು ಸ್ವಯಂ ಚಿಕಿತ್ಸೆಗಾಗಿ ಆಂಟಿಬಯೋಟಿಕ್ ಅಥವಾ ಪ್ರಿಸ್ಕ್ರಿಪ್ಶನ್ ಅಗತ್ಯವಿರುವ ನೋವು ನಿವಾರಕಗಳನ್ನು ನೀಡಬಾರದು.

ಮಾರಾಟಕ್ಕೆ ಸಂಬಂಧಿಸಿದ ದಾಖಲೆಗಳನ್ನು ನಿಯಮಾನುಸಾರ ನಿರ್ವಹಿಸಬೇಕು ಎಂದು ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ.

ವೈದ್ಯರ ಸಲಹೆಯಿಲ್ಲದೆ ಆಂಟಿಬಯೋಟಿಕ್ ಸೇವಿಸುವುದು ಅಥವಾ ಹಳೆಯ ಪ್ರಿಸ್ಕ್ರಿಪ್ಶನ್ ಆಧರಿಸಿ ಮರುಬಳಕೆ ಮಾಡುವುದರಿಂದ ಆ್ಯಂಟಿಮೈಕ್ರೊಬಿಯಲ್ ರೆಸಿಸ್ಟೆನ್ಸ್ (ಎಎಂಆರ್) ಹೆಚ್ಚುವ ಅಪಾಯವಿದೆ. ಹೆಚ್ಚಿನ ವೈರಲ್ ಸೋಂಕುಗಳಿಗೆ ಆಂಟಿಬಯೋಟಿಕ್ ಪರಿಣಾಮಕಾರಿಯಲ್ಲ ಎಂದು ಎಚ್ಚರಿಸಲಾಗಿದೆ.

ನಿಯಮ ಉಲ್ಲಂಘಿಸಿ ಔಷಧ ಮಾರಾಟ ಅಥವಾ ವಿತರಣೆ ಮಾಡಿದವರ ವಿರುದ್ಧ ಔಷಧ ಮತ್ತು ಸೌಂದರ್ಯವರ್ಧಕ ಕಾಯ್ದೆ ಹಾಗೂ ಸಂಬಂಧಿತ ನಿಯಮಗಳಡಿ ಕಾನೂನು ಕ್ರಮ ಕೈಗೊಳ್ಳಬಹುದು ಎಂದು ಸಿಡಿಎಸ್‌ಸಿಒ ತಿಳಿಸಿದೆ.

## ದಕ್ಷಿಣ ಮಧ್ಯ ರೈಲ್ವೆಯಲ್ಲಿ ಕವಚ್ 4.0 ಅಳವಡಿಕೆ

● ವಿಕ್ರಮ ವಾಹಿನಿ । ನವದೆಹಲಿ

ದಕ್ಷಿಣ ಮಧ್ಯ ರೈಲ್ವೆಯಲ್ಲಿ ಇದೇ ಮೊದಲ ಬಾರಿಗೆ ಕವಚ್ 4.0 ಸ್ವಯಂಚಾಲಿತ ರೈಲು ರಕ್ಷಣಾ ವ್ಯವಸ್ಥೆಯನ್ನು ಯಶಸ್ವಿಯಾಗಿ ಅಳವಡಿಸುವ ಮೂಲಕ ಭಾರತೀಯ ರೈಲ್ವೆ ರೈಲು ಸುರಕ್ಷತಾ ಕ್ಷೇತ್ರದಲ್ಲಿ ಮಹತ್ವದ ಹೆಜ್ಜೆ ಇಟ್ಟಿದೆ.

ಹೈದರಾಬಾದ್ ವಿಭಾಗದ ಮಲ್ಕಾಜ್‌ಗಿರಿ-ಕಾಮಾರೆಡ್ಡಿ ಮಾರ್ಗದ 108 ಕಿಲೋಮೀಟರ್ ವ್ಯಾಪ್ತಿಯಲ್ಲಿ ನವೀಕರಿಸಿದ ಕವಚ್ 4.0 ವ್ಯವಸ್ಥೆಯನ್ನು ಕಾರ್ಯಗತಗೊಳಿಸಲಾಗಿದೆ. ಇದರಿಂದ ದಕ್ಷಿಣ ಮಧ್ಯ ರೈಲ್ವೆಯಲ್ಲಿ ಈ ಹಿಂದೆ ಅಳವಡಿಸಲಾಗಿದ್ದ ಕವಚ್ 3.2 ವ್ಯವಸ್ಥೆಯಿಂದ ಕವಚ್ 4.0ಕ್ಕೆ ತಾಂತ್ರಿಕವಾಗಿ ಉನ್ನತೀಕರಣಗೊಂಡಂತಾಗಿದೆ.

ದಕ್ಷಿಣ ಮಧ್ಯ ರೈಲ್ವೆಯ 1,465 ಕಿಲೋಮೀಟರ್ ಮಾರ್ಗದಲ್ಲಿ ಈಗಾಗಲೇ ಕವಚ್ 3.2 ವ್ಯವಸ್ಥೆಯನ್ನು ಅಳವಡಿಸಲಾಗಿದ್ದು, ಅದರ ಅನುಭವದ ಆಧಾರದ ಮೇಲೆ ಕವಚ್ 4.0ರಲ್ಲಿ ಹಲವು ತಾಂತ್ರಿಕ ಸುಧಾರಣೆಗಳನ್ನು ಅಳವಡಿಸಲಾಗಿದೆ. ಹೊಸ ವ್ಯವಸ್ಥೆಯು ಹೆಚ್ಚಿನ ಸುರಕ್ಷತಾ ವೈಶಿಷ್ಟ್ಯಗಳು, ಉತ್ತಮ ವಿಶ್ವಾಸಾರ್ಹತೆ ಹಾಗೂ ಸುಧಾರಿತ ತಂತ್ರಜ್ಞಾನವನ್ನು ಒಳಗೊಂಡಿದೆ.

ಭಾರತೀಯ ರೈಲ್ವೆ ದೇಶೀಯವಾಗಿ ಅಭಿವೃದ್ಧಿಪಡಿಸಿರುವ ಕವಚ್ ವ್ಯವಸ್ಥೆಯು ಲೋಕೋ ಪೈಲಟ್‌ಗಳು ನಿಗದಿತ ವೇಗದ ಮಿತಿಯನ್ನು ಕಾಯ್ದುಕೊಳ್ಳಲು ನೆರವಾಗುತ್ತದೆ. ಅಗತ್ಯವಿದ್ದ ಸಂದರ್ಭದಲ್ಲಿ ತುರ್ತಾಗಿ ಸ್ವಯಂಚಾಲಿತವಾಗಿ ಬ್ರೇಕ್ ಅನ್ವಯಿಸುವ ಮೂಲಕ ರೈಲಿನ ವೇಗವನ್ನು ನಿಯಂತ್ರಿಸುತ್ತದೆ. ಅಪಾಯದ ಸಂಕೇತವಿದ್ದರೂ ರೈಲು ಮುಂದುವರಿಯುವುದನ್ನು ತಡೆಯುವುದು, ತುರ್ತು ಸಂದರ್ಭಗಳಲ್ಲಿ ವೇಗವನ್ನು ನಿಯಂತ್ರಿಸುವುದು ಹಾಗೂ ಅಪಘಾತದ ಸಾಧ್ಯತೆಯನ್ನು ಕಡಿಮೆ ಮಾಡುವುದು ಕವಚ್ ವ್ಯವಸ್ಥೆಯ ಪ್ರಮುಖ ಕಾರ್ಯಗಳಾಗಿವೆ. ಪ್ರತಿಕೂಲ ಹವಾಮಾನ ಪರಿಸ್ಥಿತಿಗಳಲ್ಲಿಯೂ ರೈಲು ಸುರಕ್ಷಿತವಾಗಿ ಸಂಚರಿಸಲು ಇದು ನೆರವಾಗಲಿದೆ.

ಕವಚ್ 4.0 ವ್ಯವಸ್ಥೆಗೆ ಸುರಕ್ಷತಾ ಪ್ರಮಾಣೀಕರಣದ ಅಗತ್ಯವಿದ್ದು, ಸುರಕ್ಷತಾ ಸಮಗ್ರತಾ ಮಟ್ಟ-4ಕ್ಕೆ ಅನುಗುಣವಾಗಿ ರೂಪುಗೊಂಡಿರುವ ಈ ವ್ಯವಸ್ಥೆ ರೈಲು ಕಾರ್ಯಾಚರಣೆಯ ಸುರಕ್ಷತೆಯಲ್ಲಿ ಪ್ರಮುಖ ಪಾತ್ರ ವಹಿಸಲಿದೆ.

ಕವಚ್ ವ್ಯವಸ್ಥೆಯ ಅಳವಡಿಕೆಯಲ್ಲಿ ನಿಲ್ದಾಣಗಳು ಹಾಗೂ ರೈಲು ಮಾರ್ಗದ ವಿಭಾಗಗಳಲ್ಲಿ ನಿಲ್ದಾಣ ಕವಚ್, ಹಳಿಗಳುದ್ದಕ್ಕೂ ರೇಡಿಯೊ ಆವರ್ತನ ಗುರುತಿನ ಸಂಕೇತಗಳು, ದೂರಸಂಪರ್ಕ ಗೋಪುರಗಳು, ತಂತುಜಾಲ ಕೇಬಲ್‌ಗಳು ಹಾಗೂ ರೈಲು ಎಂಜಿನ್‌ಗಳಲ್ಲಿ ಲೋಕೋ ಕವಚ್ ಉಪಕರಣಗಳ ಅಳವಡಿಕೆ ಸೇರಿದಂತೆ ಹಲವು ಘಟಕಗಳು ಒಳಗೊಂಡಿವೆ.

ದಕ್ಷಿಣ ಮಧ್ಯ ರೈಲ್ವೆಯಲ್ಲಿ ಕವಚ್ 4.0 ಕಾರ್ಯಗತಗೊಳಿಸಿರುವುದರಿಂದ ದೇಶೀಯ ರೈಲು ಸುರಕ್ಷತಾ ತಂತ್ರಜ್ಞಾನ ಮತ್ತಷ್ಟು ಬಲಗೊಳ್ಳಲಿದ್ದು, ಮುಂದಿನ ದಿನಗಳಲ್ಲಿ ಭಾರತೀಯ ರೈಲ್ವೆಯ ವಿವಿಧ ಮಾರ್ಗಗಳಲ್ಲಿ ಸುಧಾರಿತ ರೈಲು ರಕ್ಷಣಾ ವ್ಯವಸ್ಥೆಯನ್ನು ವಿಸ್ತರಿಸಲು ಇದು ನೆರವಾಗಲಿದೆ.

## ಭಾನುವಾರವೂ ಬ್ಯಾಂಕ್ ಓಪನ್; 28ರಿಂದ 3 ದಿನ ಮುಷ್ಕರ

1ನೇ ಪುಟದಿಂದ

ಹೀಗಾಗಿ ಗ್ರಾಹಕರು ಮುಷ್ಕರಕ್ಕೂ ಮುನ್ನ ಅಗತ್ಯ ಬ್ಯಾಂಕಿಂಗ್ ವ್ಯವಹಾರಗಳನ್ನು ಪೂರ್ಣಗೊಳಿಸಿಕೊಳ್ಳಬಹುದಾಗಿದೆ.

ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್ (UFBU) ಸೆ.28ರಿಂದ 30ರವರೆಗೆ ಮೂರು ದಿನಗಳ ರಾಷ್ಟ್ರವ್ಯಾಪಿ ಮುಷ್ಕರಕ್ಕೆ ಕರೆ ನೀಡಿದೆ.

ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿಗೆ ತರುವ ಬೇಡಿಕೆ ಪ್ರಮುಖವಾಗಿದ್ದು, ಮುಷ್ಕರವನ್ನು ಮುಂದೂಡುವಂತೆ ಕೇಂದ್ರ ಸರ್ಕಾರ ಹಾಗೂ ಬ್ಯಾಂಕ್ ಆಡಳಿತ ಮಂಡಳಿಗಳು ಸಂಘಟನೆಗಳಿಗೆ ಮನವಿ ಮಾಡಿವೆ.

ಈ ಕುರಿತು ನಡೆದ ಸಂಧಾನ ಸಭೆಯೂ ಯಾವುದೇ ಅಂತಿಮ ಒಪ್ಪಂದವಿಲ್ಲದೆ ಮುಕ್ತಾಯಗೊಂಡಿದೆ.

ಮುಷ್ಕರದ ಅವಧಿಯಲ್ಲಿ ಶಾಖಾ ಮಟ್ಟದ ಕೆಲವು ಸೇವೆಗಳಿಗೆ ವ್ಯತ್ಯಯ ಉಂಟಾಗುವ ಸಾಧ್ಯತೆ ಇರುವುದರಿಂದ ಗ್ರಾಹಕರು ಅಗತ್ಯ ವ್ಯವಹಾರಗಳನ್ನು ಮುಂಚಿತವಾಗಿ ಪೂರ್ಣಗೊಳಿಸಿಕೊಳ್ಳುವುದು ಸೂಕ್ತ. ಎಟಿಎಂ, ಯುಪಿಐ, ಮೊಬೈಲ್ ಬ್ಯಾಂಕಿಂಗ್ ಹಾಗೂ ಇಂಟರ್‌ನೆಟ್ ಬ್ಯಾಂಕಿಂಗ್‌ನಂತಹ ಡಿಜಿಟಲ್ ಸೇವೆಗಳನ್ನು ಅಗತ್ಯಕ್ಕೆ ಅನುಗುಣವಾಗಿ ಬಳಸಬಹುದಾಗಿದೆ.

## ಬರ ಕುರಿತು ಚರ್ಚೆ-ಅಧಿವೇಶನ ಒಂದು ದಿನ ವಿಸ್ತರಣೆ: ಸಿಎಂ

● ವಿಕ್ರಮ ವಾಹಿನಿ । ಬೆಂಗಳೂರು

"ರಾಜ್ಯದಲ್ಲಿ ಬರಗಾಲದ ತೀವ್ರತೆ ಹೆಚ್ಚಿದೆ. 200ಕ್ಕೂ ಹೆಚ್ಚು ತಾಲೂಕುಗಳು ಭೀಕರ ಬರಗಾಲಕ್ಕೆ ತುತ್ತಾಗಿದ್ದು, ಪರಿಸ್ಥಿತಿ ತೀವ್ರವಾಗಿದೆ. ಆದ ಕಾರಣ ಬರಗಾಲದ ಕುರಿತಾದ ಚರ್ಚೆ ನಡೆಸಲು ಅಧಿವೇಶನವನ್ನು ಒಂದು ದಿನ ವಿಸ್ತರಿಸಲಾಗಿದೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು.

ವಿಧಾನಸೌಧದಲ್ಲಿ ಮಾಧ್ಯಮಗಳಿಗೆ ಶಿವಕುಮಾರ್ ಅವರು ಬುಧವಾರ ಪ್ರತಿಕ್ರಿಯೆ ನೀಡಿದರು.

"ಶಾಸಕರು ಮತ್ತು ಜನಪ್ರತಿನಿಧಿಗಳು ಬರ ಕುರಿತು ವಿವರವಾಗಿ ಚರ್ಚಿಸಲು ಬಯಸಿದ್ದಾರೆ. ಸಚಿವರು ಹಾಗೂ ಉಪಮುಖ್ಯಮಂತ್ರಿಗಳು ಶಾಸಕರ ಪ್ರಶ್ನೆಗಳು ಮತ್ತು ಸಲಹೆಗಳಿಗೆ ಕಲಾಪದಲ್ಲಿ ಅಧಿಕೃತವಾಗಿ ಉತ್ತರ ನೀಡಲಿದ್ದಾರೆ" ಎಂದರು.

**ಸರ್ವಪಕ್ಷ ನಿಯೋಗ ದೆಹಲಿಗೆ:** ಸರ್ವಪಕ್ಷ ನಿಯೋಗ ದೆಹಲಿಗೆ ತೆರಳುವ ಬಗ್ಗೆ ಕೇಳಿದಾಗ, "ಬರ ಪರಿಹಾರ ಮತ್ತು ಕೇಂದ್ರದ ನೆರವಿನ ಕುರಿತು ಚರ್ಚಿಸಲು ದೆಹಲಿಗೆ ಸರ್ವಪಕ್ಷ ನಿಯೋಗ ಕರೆದೊಯ್ಯಲು ನಿರ್ಧರಿಸಲಾಗಿದೆ. ಇದಕ್ಕೆ ಎಲ್ಲಾ ಪಕ್ಷದ ನಾಯಕರು ಸಮ್ಮತಿಸಿದ್ದಾರೆ" ಎಂದು ಹೇಳಿದರು.

## "ಪಿಒಕೆಯನ್ನು ಸ್ಮಶಾನ ಮಾಡಿದ್ದಾರೆ"

● ವಿಕ್ರಮ ವಾಹಿನಿ । ಜಿನೀವಾ

ಪಾಕಿಸ್ತಾನ ಆಕ್ರಮಿತ ಕಾಶ್ಮೀರ (ಪಿಒಕೆ)ದಲ್ಲಿ ಮಾನವ ಹಕ್ಕುಗಳ ಉಲ್ಲಂಘನೆಯಾಗುತ್ತಿದೆ ಎಂದು ಕಾಶ್ಮೀರಿ ಸಾಮಾಜಿಕ-ರಾಜಕೀಯ ಕಾರ್ಯಕರ್ತೆ ತಸ್ಲೀಮಾ ಅಖ್ತರ್ ಆರೋಪಿಸಿದ್ದಾರೆ. ಜಿನೀವಾದಲ್ಲಿ ನಡೆದ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿ (UNHRC) ಅಧಿವೇಶನದಲ್ಲಿ ಮಾತನಾಡಿದ ಅವರು, ನಾಗರಿಕರ ಪ್ರತಿಭಟನೆಗಳನ್ನು ಪಾಕಿಸ್ತಾನ ಭದ್ರತಾ ಪಡೆಗಳು ದಮನಿಸುತ್ತಿವೆ ಎಂದು ದೂರಿದರು.

ಭದ್ರತಾ ಪಡೆಗಳ ಗುಂಡಿನ ದಾಳಿ ಹಾಗೂ ಪ್ರತಿಭಟನಾಕಾರರ ಸಾವಿನ ಕುರಿತು ಸ್ವತಂತ್ರ ತನಿಖೆ ನಡೆಸಬೇಕು. ಪ್ರಕರಣಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಪಾರದರ್ಶಕವಾಗಿ ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಬೇಕು ಎಂದು ಅವರು ಒತ್ತಾಯಿಸಿದರು.

ಪಿಒಕೆಯಲ್ಲಿ ಕಾರ್ಯಕರ್ತರ ಬಂಧನ, ನಾಯಕರ ವಶ ಹಾಗೂ ಇಂಟರ್ನೆಟ್ ಸ್ಥಗಿತ ಸೇರಿದಂತೆ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಸ್ಲೀಮಾ ಆರೋಪಿಸಿದರು. ಪಾಕಿಸ್ತಾನವು ಕಾಶ್ಮೀರಿಗಳ ಹಿತಾಸಕ್ತಿಯ ವಿಚಾರದಲ್ಲಿ ಪ್ರಾಮಾಣಿಕವಾಗಿ ನಡೆದುಕೊಂಡಿಲ್ಲ ಎಂದು ಅವರು ಟೀಕಿಸಿದರು.

# ಗ್ರಾ.ಪಂ.ಗಳಿಗೆ ರೂ 2,186 ಕೋಟಿ ನೀಡದ ಕೇಂದ್ರ: ಖಂಡ್ರೆ

**ಬರ ಘೋಷಣೆಗೆ ಕೇಂದ್ರದ 2020ರ ಕೈಪಿಡಿಯಲ್ಲಿರುವ ಕಠಿಣ ಷರತ್ತುಗಳು ಅವೈಜ್ಞಾನಿಕವಾಗಿದ್ದು, ಅವುಗಳಿಂದ ರಾಜ್ಯಕ್ಕೆ ಸಮಸ್ಯೆಯಾಗುತ್ತಿದೆ. ನಿಯಮ ಸರಳೀಕರಣಕ್ಕೆ ಕೇಂದ್ರಕ್ಕೆ ಪತ್ರ ಬರೆಯಲಾಗಿದೆ. ಬರ ಘೋಷಣೆ ತಾಂತ್ರಿಕ ವರದಿ ಆಧಾರಿತವಾಗಿದ್ದು, ರಾಜ್ಯ ಸರ್ಕಾರದ ಮೇಲೆ ಅಪಪ್ರಚಾರ ಮಾಡಬಾರದು ಎಂದು ಸಚಿವ ಈಶ್ವರ ಖಂಡ್ರೆ ಹೇಳಿದರು.**

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದಲ್ಲಿ ಬರ ಪರಿಸ್ಥಿತಿ ಎದುರಾಗಿರುವ ಸಂದರ್ಭದಲ್ಲಿ 15ನೇ ಹಣಕಾಸು ಆಯೋಗದ ಶಿಫಾರಸಿನಂತೆ ಗ್ರಾಮ ಪಂಚಾಯತಿಗಳಿಗೆ ಕೇಂದ್ರ ಸರ್ಕಾರ ಬಿಡುಗಡೆ ಮಾಡಬೇಕಿದ್ದ ರೂ 2,186.20 ಕೋಟಿ ಅನುದಾನವನ್ನು ನೀಡದೆ ಅನ್ಯಾಯ ಮಾಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಆರೋಪಿಸಿದರು.

ವಿಧಾನಪರಿಷತ್ತಿನಲ್ಲಿ ಬರ ಪರಿಸ್ಥಿತಿ ಕುರಿತ ಚರ್ಚೆ ವೇಳೆ ಮಧ್ಯಪ್ರವೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ 5,927 ಗ್ರಾಮ ಪಂಚಾಯತಿಗಳಿದ್ದು, ನಗರ ಪ್ರದೇಶಗಳ ಸಮೀಪದಲ್ಲಿರುವ ಪಂಚಾಯತಿಗಳು ತೆರಿಗೆ ಸಂಗ್ರಹದಿಂದ ಆರ್ಥಿಕವಾಗಿ ಸದೃಢವಾಗಿವೆ. ಆದರೆ ಕಲ್ಯಾಣ ಕರ್ನಾಟಕ ಹಾಗೂ ಉತ್ತರ ಕರ್ನಾಟಕದ ಹಲವು ಗ್ರಾಮ ಪಂಚಾಯತಿಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿವೆ.

ಇಂತಹ ಸಂದರ್ಭದಲ್ಲಿ ಕೇಂದ್ರದಿಂದ ಬರಬೇಕಾದ ಅನುದಾನ ಬಿಡುಗಡೆಯಾಗದಿರುವುದು ಸಮಸ್ಯೆಯನ್ನು ಮತ್ತಷ್ಟು ಗಂಭೀರಗೊಳಿಸಿದೆ ಎಂದರು.

ಕೇಂದ್ರ ಸರ್ಕಾರದ ಬಾಕಿ ಅನುದಾನ ಬಿಡುಗಡೆಗಾಗಿ ತಾವು ದೆಹಲಿಗೆ ತೆರಳಿ ಕೇಂದ್ರ ಸಚಿವರಾದ ಶಿವರಾಜ್ ಸಿಂಗ್ ಚೌಹಾಣ್, ಲಲನ್ ಸಿಂಗ್ ಹಾಗೂ ವಿ.ಸೋಮಣ್ಣ ಅವರನ್ನು ಖುದ್ದಾಗಿ ಭೇಟಿ ಮಾಡಿ ಮನವಿ ಮಾಡಿದ್ದರೂ ಹಣ ಬಿಡುಗಡೆಯಾಗಿಲ್ಲ. ತಾಂತ್ರಿಕ ಕಾರಣಗಳನ್ನು ಮುಂದಿಟ್ಟುಕೊಂಡು ಅನುದಾನ ತಡೆಹಿಡಿಯಲಾಗಿದೆ. ರಾಜ್ಯದ ಸಂಸದರು ಈ ವಿಚಾರವನ್ನು ಲೋಕಸಭೆಯಲ್ಲಿ ಪ್ರಶ್ನಿಸಿ ಅನುದಾನ ಬಿಡುಗಡೆಗೆ ಒತ್ತಾಯಿಸಿದ್ದಾರೆಯೇ ಎಂದು ಖಂಡ್ರೆ ಪ್ರಶ್ನಿಸಿದರು.

**ಕುಡಿಯುವ ನೀರಿಗೆ ಹಣದ ಕೊರತೆ ಇಲ್ಲ:** ರಾಜ್ಯದಲ್ಲಿ ಮಳೆಯ ಕೊರತೆಯಿಂದ ಬರ ಪರಿಸ್ಥಿತಿ ಉಂಟಾಗಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರು ಪೂರೈಸುವುದು ಸವಾಲಾಗಿದೆ. ಆದರೆ ನೀರು ಪೂರೈಕೆಗೆ ಸರ್ಕಾರದ ಬಳಿ ಹಣಕಾಸಿನ ಕೊರತೆ ಇಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.

ಬರ ಪರಿಸ್ಥಿತಿ ಎದುರಾಗಬಹುದೆಂಬ ಮುನ್ನೆಚ್ಚರಿಕೆಯಿಂದಲೇ ಗ್ರಾಮೀಣ ಕುಡಿಯುವ ನೀರಿಗಾಗಿ ರೂ 117 ಕೋಟಿ ಹಂಚಿಕೆ ಮಾಡಲಾಗಿತ್ತು. ಇದರೊಂದಿಗೆ ಮುಖ್ಯಮಂತ್ರಿ ಪ್ರತಿ ಗ್ರಾಮೀಣ ವಿಧಾನಸಭಾ ಕ್ಷೇತ್ರಕ್ಕೆ ರೂ 189 ಕೋಟಿ ಅನುದಾನ ಘೋಷಿಸಿದ್ದು, ಕುಡಿಯುವ ನೀರಿನ ವ್ಯವಸ್ಥೆಗೆ ಒಟ್ಟು ರೂ 306 ಕೋಟಿ ಲಭ್ಯವಿದೆ ಎಂದರು.

ಸೆಪ್ಟೆಂಬರ್‌ನಲ್ಲೂ ವಾಡಿಕೆಯಷ್ಟು ಮಳೆಯಾಗದ ಹಿನ್ನೆಲೆಯಲ್ಲಿ ನೀರಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಸಮಸ್ಯೆ ಇರುವ ಪ್ರದೇಶಗಳಲ್ಲಿ ಕ್ರಿಯಾ ಯೋಜನೆ ರೂಪಿಸಿ ತ್ವರಿತವಾಗಿ ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ.

ಪ್ರಸ್ತುತ ರಾಜ್ಯದ 799 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಇದ್ದು, ಅಗತ್ಯವಿರುವ ಕಡೆ ಖಾಸಗಿ ಕೊಳವೆಬಾವಿ ಹಾಗೂ ತೆರೆದ ಬಾವಿಗಳನ್ನು ಬಾಡಿಗೆಗೆ ಪಡೆದು, ಟ್ಯಾಂಕರ್‌ಗಳ ಮೂಲಕ ನೀರು ಪೂರೈಸಲಾಗುತ್ತಿದೆ. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಸರ್ಕಾರ ಅಗತ್ಯ ಸಿದ್ಧತೆ ಮಾಡಿಕೊಂಡಿದೆ ಎಂದು ಈಶ್ವರ ಖಂಡ್ರೆ ತಿಳಿಸಿದರು.

## ‘ಕೇಂದ್ರದ ಬರ ನಿರ್ವಹಣೆ ಕೈಪಿಡಿಯೇ ಅವೈಜ್ಞಾನಿಕ’

● ವಿಕ್ರಮ ವಾಹಿನಿ | ವಿಧಾನಪರಿಷತ್ತು



ಬರಪೀಡಿತ ತಾಲೂಕು ಘೋಷಣೆಗೆ ಕೇಂದ್ರ ಸರ್ಕಾರ 2020ರಲ್ಲಿ ರೂಪಿಸಿರುವ ಕೈಪಿಡಿಯ ಅಂಶಗಳು ಮತ್ತು ಷರತ್ತುಗಳು ಅವೈಜ್ಞಾನಿಕವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ವಿಧಾನಪರಿಷತ್ತಿನಲ್ಲಿಂದು ಪ್ರತಿಪಾದಿಸಿದ್ದಾರೆ.

ಬರ ಕುರಿತ ಚರ್ಚೆಯ ವೇಳೆ ಮಧ್ಯಪ್ರವೇಶಿಸಿ ಮಾತನಾಡಿದ ಅವರು, ಯಾವುದೇ ತಾಲೂಕನ್ನು ಬರಪೀಡಿತ ಎಂದು ಘೋಷಿಸಲು 3 ವಾರಗಳ ಕಾಲ ಶುಷ್ಕ ವಾತಾವರಣ ಇರಬೇಕು, ಮಳೆ ಆಗಿರಬಾರದು, ನಿಗದಿತ ಪ್ರಮಾಣಕ್ಕಿಂತ ಹೆಚ್ಚಿನ ಬಿತ್ತನೆ ಆಗಿರಬಾರದು ಎಂಬೆಲ್ಲಾ ಷರತ್ತುಗಳಿವೆ ಎಂದರು.

ಉಪಗ್ರಹ ಆಧಾರಿತವಾಗಿ ಸಂಗ್ರಹಿಸುವ ಈ ಅಂಶಗಳ ಆಧಾರದ ಮೇಲೆ ರಾಜ್ಯ ಮತ್ತು ಕೇಂದ್ರದ ಪ್ರಕೃತಿ ವಿಕೋಪ ನಿರ್ವಹಣಾ ವಿಭಾಗದ ತಾಂತ್ರಿಕ ತಂಡ ವರದಿ ಪರಿಶೀಲಿಸುತ್ತದೆ. ಜೊತೆಗೆ ದೂರಸಂವೇದಿ ತಂತ್ರಜ್ಞಾನವನ್ನೂ ಬಳಕೆ ಮಾಡುತ್ತದೆ. ಮಣ್ಣಿನ ತೇವಾಂಶದ ಪರಾಮರ್ಶೆ ಮಾಡುತ್ತದೆ. ಬೀಜ ಮೊಳಕೆ ಒಡೆದಿದೆಯೋ ಇಲ್ಲವೋ ಎಂಬ ಪರಾಮರ್ಶೆಯೂ ಆಗುತ್ತದೆ ಎಂದರು.

ಈ ಹಿಂದೆ ಸಿದ್ದರಾಮಯ್ಯ ಅವರ ಸರ್ಕಾರದ ಅವಧಿಯಲ್ಲಿ 12 ಪತ್ರಗಳನ್ನು ಕೇಂದ್ರ ಸರ್ಕಾರಕ್ಕೆ ಬರೆದಿದ್ದರು, ಈಗಲೂ ಕೇಂದ್ರ ಕೃಷಿ ಸಚಿವರಿಗೆ ಈ ನಿಯಮಗಳನ್ನು ಸರಳೀಕರಣ ಮಾಡುವಂತೆ ಪತ್ರ ಬರೆದು ಮನವಿ ಮಾಡಲಾಗಿದೆ. ಕೇಂದ್ರದ ಈ ಕೈಪಿಡಿಯ ನಿಯಮಗಳಿಂದ ಕರ್ನಾಟಕ ರಾಜ್ಯ ಮಾತ್ರವಲ್ಲ ದೇಶಾದ್ಯಂತ ಎಲ್ಲ ರಾಜ್ಯದಲ್ಲೂ, ಬಿಜೆಪಿ ಆಡಳಿತ ರಾಜ್ಯದಲ್ಲೂ ಸಮಸ್ಯೆ ಆಗಿದೆ ಎಂದು ಹೇಳಿದರು.

ಪ್ರಸ್ತುತ ಕೇಂದ್ರ ಸರ್ಕಾರದ ಅಂಗಳದಲ್ಲಿ ಚೆಂಡಿದೆ. ತಾಂತ್ರಿಕ ಮಾಹಿತಿ ಆಧಾರದಲ್ಲಿ ಬರ ಘೋಷಣೆ ಆಗುತ್ತದೆ. ಯಾರೂ ಶಿಫಾರಸು ಮಾಡಿ ಬರ ಘೋಷಿಸಲು ಸಾಧ್ಯವಿಲ್ಲ ಎಂದರು. ಹಿಂದೆ 2023–24ರಲ್ಲಿ ಮಾನದಂಡಗಳ ಆಧಾರದಲ್ಲೇ ಬರ ಘೋಷಣೆ ಮಾಡಿ ಪ್ರಸ್ತಾವನೆ ಸಲ್ಲಿಸಿದ್ದರೂ ಕೇಂದ್ರ ಸರ್ಕಾರ 3400 ಕೋಟಿ ರೂ. ಬಿಡುಗಡೆ ಮಾಡಲಿಲ್ಲ. ಆಗ ಸರ್ವೋನ್ನತ ನ್ಯಾಯಾಲಯಕ್ಕೆ ಹೋಗಬೇಕಾಯಿತು. ನ್ಯಾಯಾಲಯದ ಸೂಚನೆಯಂತೆ ಹಣವನ್ನು ಕೇಂದ್ರ ಬಿಡುಗಡೆ ಮಾಡಿತು.

ಬರ ತಾಲೂಕು ಘೋಷಣೆ ವಿಚಾರದಲ್ಲಿ ರಾಜ್ಯ ಸರ್ಕಾರದ ಮೇಲೆ ಗೂಬೆ ಕೂರಿಸಲಾಗುತ್ತಿದೆ. ಇದು ಅಪಪ್ರಚಾರ. ಇದನ್ನು ಅರ್ಥ ಮಾಡಿಕೊಂಡು ಪ್ರತಿಪಕ್ಷಗಳು ಇಂತಹ ಪ್ರಯತ್ನ ಕೈಬಿಡಬೇಕು. ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಇದ್ದು, ಕೈಪಿಡಿಯಲ್ಲಿನ ಷರತ್ತುಗಳನ್ನು ಬದಲಾವಣೆ ಮಾಡಿಸಲು ಪ್ರಯತ್ನ ಮಾಡಬೇಕು ಎಂದು ಈಶ್ವರ ಖಂಡ್ರೆ ಹೇಳಿದರು.

## ರೈಲು ಹರಿದು ನಾಲ್ವರು ವಿದ್ಯಾರ್ಥಿಗಳ ಸಾವು

● ವಿಕ್ರಮ ವಾಹಿನಿ | ಶ್ರೀಕಾಕುಳಂ

ರೈಲು ಹಳಿಯಲ್ಲಿ ನಡೆದುಕೊಂಡು ಹೋಗುತ್ತಿದ್ದ ಐವರು ವಿದ್ಯಾರ್ಥಿಗಳಿಗೆ ರಾಜರಾಣಿ ಎಕ್ಸ್‌ಪ್ರೆಸ್ ರೈಲು ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಮೃತಪಟ್ಟಿದ್ದು, ಮತ್ತೊಬ್ಬ ವಿದ್ಯಾರ್ಥಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ಆಂಧ್ರ ಪ್ರದೇಶದ ಶ್ರೀಕಾಕುಳಂ ಜಿಲ್ಲೆಯ ತೆಕ್ಕಲಿ ಮಂಡಲದ ರವಿವಲಸಾ ಸಮೀಪ ಬುಧವಾರ ನಡೆದಿದೆ.

ಮೃತರನ್ನು ವಿಶಾಖರಾವ್, ದಿಲೀಪ್ ಕುಮಾರ್, ಶಿವ ಹಾಗೂ ಶರತ್ ಕುಮಾರ್ ಎಂದು ಗುರುತಿಸಲಾಗಿದೆ. ಗಾಯಗೊಂಡಿರುವ ಸಾಲ್ಮನ್ ರಾಜು ಅವರನ್ನು ತೆಕ್ಕಲಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಮೃತರೆಲ್ಲರೂ ಇಂಟರ್‌ಮೀಡಿಯೇಟ್ ವಿದ್ಯಾರ್ಥಿಗಳಾಗಿದ್ದು, ತೆಕ್ಕಲಿಯ ಸರ್ಕಾರಿ ಎಸ್‌ಸಿ/ಎಸ್‌ಟಿ ವಿದ್ಯಾರ್ಥಿನಿಲಯದಲ್ಲಿ ವಾಸಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ವಿದ್ಯಾರ್ಥಿಗಳು ರೈಲು ಹಳಿಯಲ್ಲಿ ನಡೆದುಕೊಂಡು ತೆಕ್ಕಲಿ ಕಡೆಗೆ ತೆರಳುತ್ತಿದ್ದಾಗ ಹಿಂದಿನಿಂದ ಬಂದ ರಾಜರಾಣಿ ಎಕ್ಸ್‌ಪ್ರೆಸ್ ಅವರಿಗೆ ಡಿಕ್ಕಿ ಹೊಡೆದಿದೆ. ರೈಲು ಬರುತ್ತಿರುವುದನ್ನು ವಿದ್ಯಾರ್ಥಿಗಳು ಗಮನಿಸದಿರುವುದು ಅಪಘಾತಕ್ಕೆ ಕಾರಣವಾಗಿರಬಹುದು ಎಂದು ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ. ಅಪಘಾತದ ನಿಖರ ಕಾರಣ ಪತ್ತೆಹಚ್ಚಲು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಘಟನೆ ತಿಳಿಯುತ್ತಿದ್ದಂತೆ ಪೊಲೀಸರು ಹಾಗೂ ರೈಲ್ವೆ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದರು. ತೆಕ್ಕಲಿ ಆರ್‌ಡಿಒ ಕೃಷ್ಣಮೂರ್ತಿ ಸೇರಿದಂತೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದರು. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ.

**ರಾಮ್ ಮೋಹನ್ ನಾಯ್ಡು ಸಂತಾಪ**

ಘಟನೆಗೆ ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕೆ. ರಾಮ್ ಮೋಹನ್ ನಾಯ್ಡು ತೀವ್ರ ಆಘಾತ ವ್ಯಕ್ತಪಡಿಸಿದ್ದು, ರೈಲ್ವೆ ಮತ್ತು ಕಂದಾಯ ಇಲಾಖೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿದ್ದಾರೆ. ಮೃತ ವಿದ್ಯಾರ್ಥಿಗಳ ಕುಟುಂಬಗಳಿಗೆ ಸಂತಾಪ ಸೂಚಿಸಿದ ಅವರು, ಗಾಯಗೊಂಡಿರುವ ವಿದ್ಯಾರ್ಥಿಗೆ ಉತ್ತಮ ವೈದ್ಯಕೀಯ ಚಿಕಿತ್ಸೆ ದೊರೆಯುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

## ಪರಿಷತ್ ಚುನಾವಣೆ; ನಾಲ್ಕು ಸ್ಥಾನ ಗೆಲ್ಲುವ ವಿಶ್ವಾಸವಿದೆ: ಸಿಎಂ ಡಿ ಕೆ ಶಿವಕುಮಾರ್

● ವಿಕ್ರಮ ವಾಹಿನಿ | ಬೆಂಗಳೂರು

"ವಿಧಾನ ಪರಿಷತ್ ಚುನಾವಣೆಯಲ್ಲಿ ನಾಲ್ಕು ಸ್ಥಾನಗಳನ್ನು ಗೆಲ್ಲುವ ವಿಶ್ವಾಸ ನಮಗಿದೆ. ನಾವು ಒಂದು ವರ್ಷಗಳ ಮುಂಚಿತವಾಗಿ ಉತ್ತಮ ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ್ದೇವೆ. ಪಕ್ಷ ಹಾಗೂ ಸರ್ಕಾರ ಒಟ್ಟಾಗಿ ಕೆಲಸ ಮಾಡಲಿದೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ವಿಶ್ವಾಸ ವ್ಯಕ್ತಪಡಿಸಿದರು.

ಚುನಾವಣೆ ಸಂಬಂಧ ಸಚಿವರು ಹಾಗೂ ಪಕ್ಷದ ಶಾಸಕರ ಸಭೆ ಬಳಿಕ ಕೆಪಿಸಿಸಿ ಕಚೇರಿ ಬಳಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಬುಧವಾರ ಪ್ರತಿಕ್ರಿಯೆ ನೀಡಿದರು.

"ನಾಲ್ಕು ವಿಧಾನ ಪರಿಷತ್ ಸ್ಥಾನಗಳಿಗೆ ಚುನಾವಣೆ ಘೋಷಣೆಯಾಗಿದ್ದು, ಈಗ ಅಧಿವೇಶನ ನಡೆಯುತ್ತಿರುವ ಹಿನ್ನೆಲೆಯಲ್ಲಿ ಇಂದೇ ಚುನಾವಣೆ ಕುರಿತು ಶಾಸಕರೊಂದಿಗೆ ಸಭೆ ನಡೆಸಿ ಮಾರ್ಗದರ್ಶನ ನೀಡಲಾಗಿದೆ. ಎಲ್ಲಾ ಮಂತ್ರಿಗಳು ಹಾಗೂ ಶಾಸಕರು ಜವಾಬ್ದಾರಿ ವಹಿಸಿಕೊಂಡು ಚುನಾವಣೆ ಮಾಡಲಿದ್ದಾರೆ" ಎಂದು ತಿಳಿಸಿದರು.

ದೆಹಲಿ ಪ್ರಯಾಣದ ಬಗ್ಗೆ ಕೇಳಿದಾಗ, "ಭೇಟಿಗೆ ಸಮಯವಕಾಶ ಕೇಳಿ ಪ್ರಧಾನಮಂತ್ರಿಗಳಿಗೆ ಪತ್ರ ಬರೆದಿದ್ದೇನೆ. ಸಮಯ ನೀಡಿದ ಬಳಿಕ ಸರ್ವಪಕ್ಷ ಸಭೆ ಕರೆದುಕೊಂಡು ಹೋಗಲಾಗುವುದು" ಎಂದು ತಿಳಿಸಿದರು.

## ಇಂದು ಉತ್ತರ ಕನ್ನಡದಲ್ಲಿ ಭಾರಿ ಮಳೆ ಸಾಧ್ಯತೆ; ಯೆಲ್ಲೋ ಅಲರ್ಟ್

● ವಿಕ್ರಮ ವಾಹಿನಿ | ಕಾರವಾರ

ಉತ್ತರ ಕನ್ನಡ ಜಿಲ್ಲೆಯಲ್ಲಿ ಇಂದು ಭಾರಿ ಮಳೆಯಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದೆ. ಜಿಲ್ಲೆಯ ಕೆಲವೆಡೆ ಗುಡುಗು–ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಗಂಟೆಗೆ 30ರಿಂದ 40 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಮುನ್ಸೂಚನೆ ನೀಡಲಾಗಿದೆ.

ಜಿಲ್ಲೆಯ ಪ್ರತ್ಯೇಕ ಸ್ಥಳಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದ್ದು, ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾಡಳಿತ ಸೂಚಿಸಿದೆ. ನದಿ, ಹಳ್ಳ, ಕೆರೆ ಸೇರಿದಂತೆ ನೀರಿನ ಪ್ರದೇಶಗಳ ಬಳಿ ತೆರಳದಂತೆ ಹಾಗೂ ತಗ್ಗು ಪ್ರದೇಶಗಳಲ್ಲಿ ಎಚ್ಚರಿಕೆಯಿಂದ ಇರುವಂತೆ ಸೂಚಿಸಲಾಗಿದೆ. ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರವನ್ನು 247 ಕಾರ್ಯನಿರ್ವಹಿಸುವಂತೆ ವ್ಯವಸ್ಥೆ ಮಾಡಲಾಗಿದೆ. ಮಳೆ ಹಾಗೂ ಗಾಳಿ ಹೆಚ್ಚಾದರೆ ಅನಗತ್ಯವಾಗಿ ಮನೆಯಿಂದ ಹೊರಬರದಂತೆ ಜಿಲ್ಲಾಡಳಿತ ಮನವಿ ಮಾಡಿದೆ.

## ಬರ ಪಟ್ಟಿಯಲ್ಲಿ ಕ್ಷೇತ್ರ ಕಡೆಗಣನೆ: ಯಶವಂತರಾಯಗೌಡ ರಾಜೀನಾಮೆ

● ವಿಕ್ರಮ ವಾಹಿನಿ | ಬೆಂಗಳೂರು



ತಮ್ಮ ಕ್ಷೇತ್ರದ ಇಂಡಿ ಮತ್ತು ಚಡಚಣ ತಾಲ್ಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸದಿರುವುದನ್ನು ವಿರೋಧಿಸಿ ಕಾಂಗ್ರೆಸ್ ಶಾಸಕ ಯಶವಂತರಾಯಗೌಡ ಪಾಟೀಲ್ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದರು.

ವಿಧಾನಸಭಾಧ್ಯಕ್ಷ ಬಿ.ಎಸ್. ಪಾಟೀಲ್ ಅವರನ್ನು ಭೇಟಿ ಮಾಡಿದ ಅವರು ರಾಜೀನಾಮೆ ಪತ್ರ ಸಲ್ಲಿಸಿ, ಆಡಳಿತ ಪಕ್ಷದ ಶಾಸಕನಾಗಿ ಸರ್ಕಾರಕ್ಕೆ ಮುಜುಗರವಾಗದಂತೆ ಹಲವು ಬಾರಿ ಮನವಿ ಮಾಡಿದ್ದರೂ ತಮ್ಮ ಕ್ಷೇತ್ರದ ಜನರ ಸಮಸ್ಯೆಗಳಿಗೆ ಸ್ಪಂದನೆ ದೊರೆಯುತ್ತಿಲ್ಲ. ಒತ್ತಡ ಹೇರುವ ಬಲಾಢ್ಯರಿಗೆ ಮಾತ್ರ ಮನ್ನಣೆ ಸಿಗುತ್ತಿರುವ ಪರಿಸ್ಥಿತಿಯಲ್ಲಿ ಕ್ಷೇತ್ರದ ಆಶೋತ್ತರಗಳಿಗೆ ಸ್ಪಂದಿಸಲಾಗದ ಕಾರಣ ರಾಜೀನಾಮೆ ನೀಡುತ್ತಿರುವುದಾಗಿ ತಿಳಿಸಿದ್ದಾರೆ.

ರಾಜೀನಾಮೆ ವಿಷಯ ತಿಳಿಯುತ್ತಿದ್ದಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಧಾನಸಭೆಗೆ ಆಗಮಿಸಿ, ಯಶವಂತರಾಯಗೌಡ ಪಾಟೀಲ್ ಅವರನ್ನು ತಮ್ಮ ಕಚೇರಿಗೆ ಕರೆಸಿ ಮಾತುಕತೆ ನಡೆಸಿದರು. ಬರ ಘೋಷಣೆಗೆ ಇರುವ ಕೇಂದ್ರದ ಮಾನದಂಡಗಳು ಹಾಗೂ ಇಂಡಿ, ಚಡಚಣ ತಾಲ್ಲೂಕುಗಳ ವಾಸ್ತವ ಪರಿಸ್ಥಿತಿ ಕುರಿತು ವಿವರಿಸಿದರು.

ಬರಪೀಡಿತ ತಾಲ್ಲೂಕುಗಳ ಘೋಷಣೆ ಪ್ರಕ್ರಿಯೆ ಪೂರ್ಣಗೊಂಡಿಲ್ಲ. ಮುಂದಿನ ಹಂತದಲ್ಲಿ ಇನ್ನಷ್ಟು ತಾಲ್ಲೂಕುಗಳನ್ನು ಪರಿಗಣಿಸುವಾಗ ಇಂಡಿ ಮತ್ತು ಚಡಚಣವನ್ನೂ ಸೇರಿಸುವ ಕುರಿತು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿ, ದುಡುಕಿನ ನಿರ್ಧಾರ ಕೈಗೊಳ್ಳದೆ ರಾಜೀನಾಮೆ ಹಿಂಪಡೆಯುವಂತೆ ಸಿಎಂ ಮನವಿ ಮಾಡಿದರು ಎನ್ನಲಾಗಿದೆ.

ಬರ ಪಟ್ಟಿಗೆ ತಮ್ಮ ಕ್ಷೇತ್ರವನ್ನು ಸೇರಿಸುವಂತೆ ಆಡಳಿತ ಪಕ್ಷದ ಹಲವು ಶಾಸಕರು ಸರ್ಕಾರದ ಮೇಲೆ ಒತ್ತಡ ಹೇರುತ್ತಿದ್ದಾರೆ.

ಗದಗವನ್ನು ಬರಪೀಡಿತ ಎಂದು ಘೋಷಿಸದಿದ್ದರೆ ರಾಜೀನಾಮೆ ನೀಡುವುದಾಗಿ ಹಿರಿಯ ಶಾಸಕ ಹೆಚ್. ಕೆ. ಪಾಟೀಲ್ ಎಚ್ಚರಿಸಿದ್ದರೆ, ಮುದ್ದೇಬಿಹಾಳ ಶಾಸಕ ಅಪ್ಪಾಜಿ ನಾಡಗೌಡ ಕೂಡ ಪ್ರತಿಭಟನೆ ನಡೆಸುವ ಎಚ್ಚರಿಕೆ ನೀಡಿದ್ದಾರೆ.


ಈ ಬೆಳವಣಿಗೆ ವಿಧಾನಸಭೆಯಲ್ಲೂ ಪ್ರತಿಧ್ವನಿಸಿತು. ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು ಯಶವಂತರಾಯಗೌಡರ ರಾಜೀನಾಮೆ ಪತ್ರವನ್ನು ಸದನದಲ್ಲಿ ಪ್ರಸ್ತಾಪಿಸಿ, ಆಡಳಿತ ಪಕ್ಷದ ಶಾಸಕರೇ ರಾಜೀನಾಮೆ ನೀಡುತ್ತಿರುವುದು ಆತಂಕಕಾರಿ ಬೆಳವಣಿಗೆ ಎಂದು ಟೀಕಿಸಿದರು. ಇದಕ್ಕೆ ಆಡಳಿತ ಮತ್ತು ಪ್ರತಿಪಕ್ಷ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು.

## ‘ಕೆಪಿಎಸ್‌ಸಿ ಸಂಸ್ಥೆ ಚೆನ್ನಾಗಿಯೇ ಇದೆ, ಕೆಟ್ಟ ಜನ ಬಂದು ಕೂತಿದ್ದಾರಷ್ಟೇ’

● ವಿಕ್ರಮ ವಾಹಿನಿ | ಬೆಂಗಳೂರು

ಭ್ರಷ್ಟಾಚಾರದ ಆರೋಪ ಹೊತ್ತಿರುವ ಕೆಪಿಎಸ್‌ಸಿಯನ್ನು ಮುಚ್ಚಲು ಕಾನೂನು ತಜ್ಞರ ಜತೆ ಚರ್ಚೆ ನಡೆಸುತ್ತಿದ್ದೇವೆ ಎಂದು ಹೇಳಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹರಿಹಾಯ್ದಿದ್ದು, ಮುಖ್ಯಮಂತ್ರಿಗೆ ಶಾಸನದ ಗಂಧಗಾಳಿಯೇ ಗೊತ್ತಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.

ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಕರ್ನಾಟಕ ಲೋಕಸೇವಾ ಆಯೋಗವನ್ನು ಶಾಸನಬದ್ಧವಾಗಿ ಮುಚ್ಚುತ್ತೇವೆ ಎನ್ನುವ ಮುಖ್ಯಮಂತ್ರಿ ಹೇಳಿಕೆ ಕೇವಲ ಹತಾಶೆಯಿಂದಷ್ಟೇ ಕೂಡಿಲ್ಲ, ಅದು ಬುದ್ಧಿಗೇಡಿತನ, ಹೊಣೆಗೇಡಿತನ ಮತ್ತು ಅಜ್ಞಾನದ ಪರಮಾವಧಿ.



ಇವರ ವರಸೆ ಹೇಗಿದೆ ಎಂದರೆ ‘ಎತ್ತಿಗೆ ಜ್ವರ ಬಂದರೆ ಎಮ್ಮೆಗೆ ಬರೆ ಹಾಕಿದಂತೆ, ನೆಗಡಿ ಬಂದರೆ ಮೂಗಿಗೇ ಕತ್ತರಿ ಹಾಕಿದಂತೆ’ ಎಂದು ಲೇವಡಿ ಮಾಡಿದ್ದಾರೆ.

ಕೆಪಿಎಸ್‌ಸಿ ಸಂಸ್ಥೆ ಚೆನ್ನಾಗಿಯೇ ಇದೆ, ಕೆಟ್ಟ ಜನ ಬಂದು ಕೂತಿದ್ದಾರಷ್ಟೇ. ಬೇಲಿಯೇ ಹೊಲ ಮೇಯುತ್ತಿದೆ. ಅಲ್ಲಿಗೆ ಖದೀಮರನ್ನು ನೇಮಕ ಮಾಡಿದ್ದು ಯಾರು? ವಸೂಲಿಗೆ ಅಂಗಡಿ ತೆರೆಯಲು ಅವಕಾಶ ಕೊಟ್ಟಿದ್ದು ಯಾರು? ವಿಧಾನಸೌಧದ 3ನೇ ಮಹಡಿಯಲ್ಲಿ ಕೂತವರೇ ಎಸಗಿದ ಪಾಪವಲ್ಲವೇ ಇದು? ಆ ಲೆಕ್ಕಕ್ಕೆ ಬಂದರೆ ವಿಧಾನಸೌಧವನ್ನೇ ಮುಚ್ಚಬೇಕು. ನಿಮ್ಮ ಸಾರಥ್ಯದಲ್ಲಿ ಅದೂ ನಡೆದುಹೋಗಲಿ ಎಂದು ಟಾಂಗ್ ನೀಡಿದ್ದಾರೆ.

ಬೇಜವಾಬ್ದಾರಿಯಿಂದ ಚಪಲಕ್ಕೆ ನಾಲಿಗೆ ಜಾರುವ ಮೊದಲು ಕೆಪಿಎಸ್‌ಸಿ ಎಂದರೆ ಏನು? ಅದರ ಸಂರಚನೆ, ಸ್ವರೂಪ ಹೇಗಿರುತ್ತದೆ? ಸಾಂವಿಧಾನಿಕವಾಗಿ ಅದಕ್ಕಿರುವ ರಕ್ಷಣೆ ಏನು? ಆ ಸಂಸ್ಥೆ ನಡೆದುಬಂದ ಹಾದಿ, ಹೆಗ್ಗಳಿಕೆ ಬಗ್ಗೆ ತಿಳಿದುಕೊಳ್ಳಿ. ಹೊಲಕ್ಕೆ ಕಳೆ ಬಿದ್ದರೆ ಅದನ್ನು ಕಿತ್ತೆಸೆಯಬೇಕು, ಹೊಲಕ್ಕೇ ವಿಷವುಣಿಸುವ ಕೆಲಸ ಆಗಬಾರದು ಎಂದು ಕಿವಿಮಾತು ಹೇಳಿದ್ದಾರೆ.

## ಸದನದಲ್ಲೇ ಕಾಂಗ್ರೆಸ್ ಶಾಸಕರ ವಾಕ್ಸಮರ

● ವಿಕ್ರಮ ವಾಹಿನಿ | ಬೆಂಗಳೂರು

ವಿಧಾನಸಭೆ ಕಲಾಪದ ವೇಳೆ ಕೋಲಾರ ಜಿಲ್ಲೆಯ ಕಾಂಗ್ರೆಸ್ ಶಾಸಕರ ನಡುವೆ ಬುಧವಾರ ಮಾತಿನ ಚಕಮಕಿ ನಡೆದ ಘಟನೆ ನಡೆಯಿತು. ಬರ ಪರಿಸ್ಥಿತಿ ಹಾಗೂ ಶಾಸಕ ಯಶವಂತರಾಯಗೌಡ ಪಾಟೀಲ್ ರಾಜೀನಾಮೆ ಕುರಿತು ಚರ್ಚೆ, ಗದ್ದಲ ನಡೆಯುತ್ತಿದ್ದ ಸಂದರ್ಭದಲ್ಲೇ ಆಡಳಿತ ಪಕ್ಷದ ಶಾಸಕರ ನಡುವಿನ ಭಿನ್ನಾಭಿಪ್ರಾಯ ಬಹಿರಂಗವಾಯಿತು.

ಬಂಗಾರಪೇಟೆ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಮತ್ತು ಕೆಜಿಎಫ್ ಶಾಸಕಿ ರೂಪಾ ಶಶಿಧರ್ ನಡುವೆ ಮಾತಿನ ಚಕಮಕಿ ನಡೆಯಿತು. ನಾರಾಯಣಸ್ವಾಮಿ ಹಾಗೂ ಬಾಗೇಪಲ್ಲಿ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ತಮ್ಮ ಆಸನಗಳಲ್ಲಿ ಕುಳಿತು ಮಾತನಾಡುತ್ತಿದ್ದ ವೇಳೆ ರೂಪಾ ಶಶಿಧರ್ ಅಲ್ಲಿಗೆ ತೆರಳಿ ಆಕ್ಷೇಪ ವ್ಯಕ್ತಪಡಿಸಿದರು.

ತಮ್ಮ ಬಗ್ಗೆ ಮಾತನಾಡುತ್ತಾ ಅಪಹಾಸ್ಯ ಮಾಡುತ್ತಿದ್ದಾರೆ ಎಂದು ಆರೋಪಿಸಿದ ರೂಪಾ ಶಶಿಧರ್, ನಾರಾಯಣಸ್ವಾಮಿ ವಿರುದ್ಧ ಏರುದನಿಯಲ್ಲಿ ಆಕ್ರೋಶ ವ್ಯಕ್ತಪಡಿಸಿ ಮೇಜು ಬಡಿದ ಘಟನೆ ನಡೆಯಿತು.

“ನನ್ನನ್ನು ಅಪಮಾನ ಮಾಡುತ್ತಿದ್ದೀರಿ. ನೀವೆಲ್ಲ ಒಂದಾಗಿದ್ದೀರಿ” ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಈ ವೇಳೆ ಘಟನೆಯನ್ನು ಗಮನಿಸಿದ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, “ಇಲ್ಲೊಂದು ದೊಡ್ಡ ಗಲಾಟೆ ನಡೆಯುತ್ತಿದೆ ನೋಡಿ. ಸುಮ್ನಿರಮ್ಮಾ, ಹೊಡಿಬೇಡ ಅವನಿಗೆ” ಎಂದು ವ್ಯಂಗ್ಯವಾಗಿ ಪ್ರತಿಕ್ರಿಯಿಸಿದರು. ಘಟನೆಯಿಂದ ಕೆಲಕಾಲ ಸದನದಲ್ಲಿ ಅನಿರೀಕ್ಷಿತ ವಾತಾವರಣ ನಿರ್ಮಾಣವಾಯಿತು.

## ಒಣಗುತ್ತಿದೆ ಬೆಳೆ, ಕರಗುತ್ತಿದೆ ಕಾಸು; ಟ್ಯಾಂಕರ್ ಮೊರೆ ಹೋದ ರೈತರು

● ವಿಕ್ರಮ ವಾಹಿನಿ | ಬಳ್ಳಾರಿ

ವಿಜಯನಗರ ಜಿಲ್ಲೆಯಲ್ಲಿ ಮುಂಗಾರು ಮಳೆ ಕೈಕೊಟ್ಟ ಪರಿಣಾಮ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಒಣಗುತ್ತಿರುವ ರಾಗಿ ಬೆಳೆಯನ್ನು ಉಳಿಸಿಕೊಳ್ಳಲು ಖಾಸಗಿ ಟ್ಯಾಂಕರ್‌ಗಳ ಮೂಲಕ ನೀರು ಹರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.

ಕೊಟ್ಟೂರು ತಾಲೂಕಿನ ನಿಂಬಳಗೇರಿ ಗ್ರಾಮದ ರೈತರಾದ ಸುರೇಶ ಶೆಟ್ಟಿ ಹಾಗೂ ಅಂಗಡಿ ಗಂಗಾಧರ ಅವರು ಒಟ್ಟು 12 ಎಕರೆ ಜಮೀನಿನಲ್ಲಿ ರಾಗಿ ಬಿತ್ತನೆ ಮಾಡಿದ್ದರು. ಆದರೆ, ಸಕಾಲದಲ್ಲಿ ಮಳೆಯಾಗದೆ ಹಾಗೂ ಅಂತರ್ಜಲ ಮಟ್ಟ ಕುಸಿದ ಪರಿಣಾಮ ತೆನೆ ಕಟ್ಟುವ ಹಂತದಲ್ಲಿರುವ ಬೆಳೆ ನೀರಿನ ಕೊರತೆಯಿಂದ ಒಣಗುವ ಭೀತಿ ಎದುರಾಗಿದೆ.

ಬೆಳೆ ಕಣ್ಣೆದುರೇ ಒಣಗುವುದನ್ನು ತಡೆಯಲು ರೈತರು ಖಾಸಗಿ ವಾಟರ್ ಟ್ಯಾಂಕರ್‌ಗಳ ಮೊರೆ ಹೋಗಿದ್ದಾರೆ. ಐದು ಟ್ಯಾಂಕರ್‌ಗಳ ಮೂಲಕ ಬೆಳೆಗಳಿಗೆ ನೀರುಣಿಸುತ್ತಿದ್ದು, ಇದಕ್ಕಾಗಿ ದಿನಕ್ಕೆ ಸುಮಾರು 5 ಸಾವಿರ ಬಾಡಿಗೆ ಪಾವತಿಸುತ್ತಿದ್ದಾರೆ. ಈಗಾಗಲೇ ಕೃಷಿ ವೆಚ್ಚದಿಂದ ಹೊರೆಯಾಗಿರುವ ರೈತರಿಗೆ ಟ್ಯಾಂಕರ್ ನೀರಿನ ಹೆಚ್ಚುವರಿ ಖರ್ಚು ಮತ್ತಷ್ಟು ಆರ್ಥಿಕ ಸಂಕಷ್ಟ ತಂದಿದೆ.



**ಪರಿಹಾರಕ್ಕೆ ಒತ್ತಾಯ:** “ಕಷ್ಟಪಟ್ಟು ಬೆಳೆದ ಬೆಳೆಯನ್ನು ಕಣ್ಣೆದುರೇ ಒಣಗಲು ಬಿಡಲಾಗದೆ ಸಾಲ ಮಾಡಿ ಟ್ಯಾಂಕರ್ ನೀರು ಹರಿಸುತ್ತಿದ್ದೇವೆ. ಸರ್ಕಾರ ತಕ್ಷಣ ಬೆಳೆಹಾನಿ ಸಮೀಕ್ಷೆ ನಡೆಸಿ ಸೂಕ್ತ ಪರಿಹಾರ ನೀಡಬೇಕು” ಎಂದು ರೈತರು ಒತ್ತಾಯಿಸಿದ್ದಾರೆ.

ರೈತರ ಪ್ರಕಾರ, ರಾಗಿ ಬೆಳೆ ನಿರ್ಣಾಯಕ ಹಂತದಲ್ಲಿರುವುದರಿಂದ ಇನ್ನೂ ಕೆಲ ದಿನ ನೀರು ಪೂರೈಸಿದರೆ ಫಸಲನ್ನು ಉಳಿಸಿಕೊಳ್ಳುವ ಸಾಧ್ಯತೆಯಿದೆ. ಆದರೆ ನಿರಂತರವಾಗಿ ಟ್ಯಾಂಕರ್ ನೀರು ಖರೀದಿಸುವುದು ಸಣ್ಣ ಮತ್ತು ಮಧ್ಯಮ ರೈತರಿಗೆ ದುಬಾರಿಯಾಗಿದ್ದು, ಬೆಳೆ ಉಳಿಸುವುದೇ ದೊಡ್ಡ ಸವಾಲಾಗಿದೆ.

ಮಳೆ ಕೊರತೆ ಮುಂದುವರಿದರೆ ಜಿಲ್ಲೆಯ ಹಲವು ಗ್ರಾಮಗಳಲ್ಲಿ ಇದೇ ರೀತಿಯ ಪರಿಸ್ಥಿತಿ ಉಂಟಾಗುವ ಆತಂಕ ರೈತರಲ್ಲಿ ಮೂಡಿದೆ. ಬರ ಪರಿಸ್ಥಿತಿಯನ್ನು ಪರಿಗಣಿಸಿ ಸರ್ಕಾರ ತುರ್ತು ನೀರಿನ ವ್ಯವಸ್ಥೆ, ಬೆಳೆಹಾನಿ ಸಮೀಕ್ಷೆ ಹಾಗೂ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ರೈತರು ಮನವಿ ಮಾಡಿದ್ದಾರೆ.

## ಯುಜಿ ನೀಟ್: 3ನೇ ಸುತ್ತಿನ ಕೌನ್ಸೆಲಿಂಗ್ ಇಂದಿನಿಂದ ಆರಂಭ

● ವಿಕ್ರಮ ವಾಹಿನಿ | ಬೆಂಗಳೂರು

ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಮೂರನೇ ಸುತ್ತಿನ ಸೀಟು ಹಂಚಿಕೆ ಪ್ರಕ್ರಿಯೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ಸೆ.24ರಿಂದ ಆರಂಭಿಸಲಿದೆ. ಅರ್ಹ ಅಭ್ಯರ್ಥಿಗಳು ಸೆ.28ರೊಳಗೆ ತಾವು ಆಯ್ಕೆ ಮಾಡಿಕೊಳ್ಳುವ ಕೋರ್ಸ್‌ಗಳ ಶುಲ್ಕಕ್ಕೆ ಅನುಗುಣವಾಗಿ ಕಾಷನ್ ಡೆಪಾಸಿಟ್ ಪಾವತಿಸಬೇಕು. ಸೆ.25ರಿಂದ 29ರವರೆಗೆ ಹೊಸದಾಗಿ ಆಪ್ಷನ್ಸ್ ದಾಖಲಿಸಲು ಅವಕಾಶವಿದ್ದು, ಹಿಂದಿನ ಆಪ್ಷನ್ಸ್ ಪರಿಗಣಿಸಲಾಗುವುದಿಲ್ಲ ಎಂದು ಕೆಇಎ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಇದುವರೆಗೆ ಸೀಟು ಹಂಚಿಕೆಯಾಗದವರು, ಸೀಟು ಹಂಚಿಕೆಯಾದ ಬಳಿಕ ದಂಡ ಪಾವತಿಸಿದವರು ಹಾಗೂ ಈಗಾಗಲೇ ಪ್ರವೇಶ ಪಡೆದು ಉತ್ತಮ ಸೀಟಿಗೆ ಅಪ್‌ಗ್ರೇಡ್ ಬಯಸುವವರು 3ನೇ ಸುತ್ತಿನಲ್ಲಿ ಭಾಗವಹಿಸಬಹುದು. ಆದರೆ ಯಾವುದೇ ಚಾಯ್ಸ್ ಆಯ್ಕೆ ಮಾಡದವರು ಹಾಗೂ ಚಾಯ್ಸ್–4 ನೀಡಿ ಕೌನ್ಸೆಲಿಂಗ್‌ನಿಂದ ಹೊರಬಂದವರು ಅರ್ಹರಲ್ಲ.

ರೂ 1 ಲಕ್ಷ ಕಾಷನ್ ಡೆಪಾಸಿಟ್ ಪಾವತಿಸಿದವರಿಗೆ ವೈದ್ಯಕೀಯ ಸರ್ಕಾರಿ ಸೀಟು ಹಾಗೂ ದಂತ ವೈದ್ಯಕೀಯದ ಎಲ್ಲ ಸೀಟುಗಳಿಗೆ, ರೂ 12 ಲಕ್ಷ ಪಾವತಿಸಿದವರಿಗೆ ಸರ್ಕಾರಿ ಮತ್ತು ಖಾಸಗಿ ಸೀಟುಗಳಿಗೆ ಹಾಗೂ ರೂ 25 ಲಕ್ಷ ಪಾವತಿಸಿದವರಿಗೆ ಎಲ್ಲ ವಿಧದ ಸೀಟುಗಳಿಗೆ ಆಪ್ಷನ್ಸ್ ದಾಖಲಿಸಲು ಅವಕಾಶವಿದೆ. ಈಗಾಗಲೇ ವೈದ್ಯಕೀಯ ಅಥವಾ ದಂತ ವೈದ್ಯಕೀಯ ಪ್ರವೇಶ ಪಡೆದವರಿಗೆ ಕಾಷನ್ ಡೆಪಾಸಿಟ್ ಅಗತ್ಯವಿಲ್ಲ.

3ನೇ ಸುತ್ತಿನಲ್ಲಿ ಸೀಟು ಹಂಚಿಕೆಯಾದ ಬಳಿಕ ಕಾಲೇಜಿಗೆ ವರದಿ ಮಾಡದಿದ್ದರೆ ಕಾಷನ್ ಡೆಪಾಸಿಟ್ ಮುಟ್ಟುಗೋಲು ಹಾಕಿಕೊಳ್ಳಲಾಗುತ್ತದೆ. ಎಂಸಿಸಿ 3ನೇ ಸುತ್ತಿನ ಫಲಿತಾಂಶ ಪ್ರಕಟವಾದ ಬಳಿಕ ಕೆಇಎ ತನ್ನ ತಾತ್ಕಾಲಿಕ ಫಲಿತಾಂಶ ಪ್ರಕಟಿಸಲಿದೆ. ಎಂಜಿನಿಯರಿಂಗ್ ಸೇರಿದಂತೆ ಇತರೆ ಸಿಇಟಿ ಕೋರ್ಸ್‌ಗಳಿಗೆ ಪ್ರವೇಶ ಪಡೆದವರು ವೈದ್ಯಕೀಯ ಅಥವಾ ದಂತ ವೈದ್ಯಕೀಯಕ್ಕೆ ನಿಜವಾಗಿಯೂ ಆಸಕ್ತಿ ಇದ್ದರೆ ಮಾತ್ರ ಆಪ್ಷನ್ಸ್ ದಾಖಲಿಸುವಂತೆ ಕೆಇಎ ಸಲಹೆ ನೀಡಿದೆ.

## ಸೆ.26ಕ್ಕೆ ‘ಪರಮ್ ವಿಹಾರ’ ಸಾಂಸ್ಕೃತಿಕ ಸಂಜೆ

● ವಿಕ್ರಮ ವಾಹಿನಿ | ಬೆಂಗಳೂರು



ಯುವ ಕಲಾವಿದರಿಗೆ ವೇದಿಕೆ ಕಲ್ಪಿಸುವ ಹಾಗೂ ಕಲಾ–ಸಂಸ್ಕೃತಿಯ ಆಸಕ್ತಿಯನ್ನು ಬೆಳೆಸುವ ಉದ್ದೇಶದಿಂದ ‘ಪರಮ್ ಕಲ್ಚರ್’ ಆಯೋಜಿಸುತ್ತಿರುವ ಮಾಸಿಕ ಸಾಂಸ್ಕೃತಿಕ ಸರಣಿ ‘ಪರಮ್ ವಿಹಾರ’ದ 16ನೇ ಆವೃತ್ತಿ ಸೆ.26ರಂದು ಸಂಜೆ 6ರಿಂದ 8ರವರೆಗೆ ಬನಶಂಕರಿ 2ನೇ ಹಂತದ ಸುಚಿತ್ರಾ ಸಿನಿಮಾ ಮತ್ತು ಸಾಂಸ್ಕೃತಿಕ ಅಕಾಡೆಮಿಯಲ್ಲಿ ನಡೆಯಲಿದೆ.

ಕಾರ್ಯಕ್ರಮದಲ್ಲಿ ಖ್ಯಾತ ವಿದ್ವಾನ್ ಗೋಪಾಲ್ ವೆಂಕಟರಮಣ ಅವರ ಶಿಷ್ಯೆಯರಾದ ನಿರೀಕ್ಷಾ ಜಿ. ಹಾಗೂ ಸಿ.ಸಿ. ಹಾಸಿನಿ ಅವರು ವೀಣಾ ಜುಗಲ್ಬಂದಿ ಪ್ರಸ್ತುತಪಡಿಸಲಿದ್ದಾರೆ. ಬಳಿಕ ನೃತ್ಯಗುರು ಶೃಂಗಾರಮಣಿ ದೇಬಾಶಿಶ್ ಪಟ್ನಾಯಕ್ ಅವರ ಶಿಷ್ಯೆ ಅನಯಾ ಪತಿ ಅವರು ‘ಜಗದೀಶ್ವರ: ದಿ ಡ್ಯಾನ್ಸ್ ಆಫ್ ದಿ ಡಿವೈನ್’ ಪರಿಕಲ್ಪನೆಯಡಿ ಒಡಿಸ್ಸಿ ನೃತ್ಯ ಪ್ರದರ್ಶನ ನೀಡಲಿದ್ದಾರೆ.



ಶಾಸ್ತ್ರೀಯ ಕಲೆಗಳನ್ನು ಜನಸಾಮಾನ್ಯರ ಸನಿಹಕ್ಕೆ ತರುವ ಹಾಗೂ ಯುವ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ಉದ್ದೇಶದ ಕಾರ್ಯಕ್ರಮಕ್ಕೆ ಸಂಗೀತ ಮತ್ತು ನೃತ್ಯಾಸಕ್ತರಿಗೆ ಮುಕ್ತ ಪ್ರವೇಶವಿದೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ಸಿಎಂ ರಾಜೀನಾಮೆಗೆ ಆರ್.ಅಶೋಕ್ ಆಗ್ರಹ

● ವಿಕ್ರಮ ವಾಹಿನಿ | ಬೆಂಗಳೂರು

ಹಣಕಾಸು ಇಲಾಖೆ ನಿಭಾಯಿಸಲು ಇವರಿಂದ ಆಗುತ್ತಿಲ್ಲ. ಆದ್ದರಿಂದ ನೀವು ಮುಖ್ಯಮಂತ್ರಿ ಆಗಿರೋಕೆ ಲಾಯಕ್ಕಿಲ್ಲ. ತಕ್ಷಣವೇ ರಾಜೀನಾಮೆ ಕೊಡಿ. ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ್ ಅವರು ಆಗ್ರಹಿಸಿದ್ದಾರೆ.

ವಿಧಾನಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆ ಬಳಿ ಇಂದು ಬೆಳಿಗ್ಗೆ ಬಿಜೆಪಿ ವತಿಯಿಂದ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಿಮ್ಮ ಹಣಕಾಸು ಇಲಾಖೆ ನಿಯಂತ್ರಿಸಲು ನಿಮಗೆ ಶಕ್ತಿ ಇಲ್ಲ ಎಂದು ಆಕ್ಷೇಪಿಸಿದರು.

ಡಿಕೆ ದಿವಾಳಿ! ಇದು ಪಾಪರ್ ಸರ್ಕಾರ ಇವತ್ತು ಕರ್ನಾಟಕದಲ್ಲಿ ಸರ್ಕಾರ ನಡೆಸುವಂತ ಯೋಗ್ಯತೆಯನ್ನು ಕಳೆದುಕೊಂಡಿದ್ದಾರೆ ಇವತ್ತು. ಹಣ ಇಲ್ಲದೆ ಕಾಂಗ್ರೆಸ್ ಪಾರ್ಟಿಯ ಕರ್ನಾಟಕದಲ್ಲಿ ಡಿ.ಕೆ. ಶಿವಕುಮಾರ್ ಸರ್ಕಾರ ಹಣದ ಕೊರತೆ ದಿವಾಳಿ ಆಗಿರೋದಕ್ಕೆ ಒಂದು ಹಣಕಾಸು ಇಲಾಖೆಯವರು ಒಂದು ಶ್ವೇತಪತ್ರನೇ ಬಿಡುಗಡೆ ಮಾಡಿಬಿಟ್ಟಿದ್ದಾರೆ ಎಂದು ಗಮನ ಸೆಳೆದರು.

ಡಿ.ಕೆ. ಶಿವಕುಮಾರಣ್ಣ ನೀನು ಎಲ್ಲಿ ಮೊನ್ನೆ ಮಂಗಳೂರಿಗೆ ಹೋಗಿದ್ದೆ, 32 ಸಾವಿರ ಕೋಟಿ,



ಮಂಗಳೂರಲ್ಲಿ ಮೀನು ತಿಂದ್ಮೇಲೆ 32 ಸಾವಿರ ಕೋಟಿ ಘೋಷಿಸಿದ್ದಾರೆ.

ಗುಲ್ಬರ್ಗಾಗೆ ಹೋಗಿದ್ರಿ ಸಿದ್ದರಾಮಯ್ಯನವರು ಅಲ್ಲಿ 40 ಸಾವಿರ ಕೋಟಿ, ಚಾಮರಾಜನಗರಕ್ಕೆ ಹೋಗಿದ್ರಿ 20 ಸಾವಿರ ಕೋಟಿ, ಅಲ್ಲಿ ಇಲ್ಲಿ ಕ್ಯಾಬಿನೆಟ್ ಮಾಡಿದ್ವಿ 25 ಸಾವಿರ ಕೋಟಿ, ಬಾಗಲಕೋಟೆಯಲ್ಲಿ ಕ್ಯಾಬಿನೆಟ್ ಅಲ್ಲಿ ಒಂದು 50 ಸಾವಿರ ಕೋಟಿ ಪ್ರಕಟಿಸಿದ್ದೀರಿ ಎಂದು ಟೀಕಿಸಿದರು.

ಕಾಂಗ್ರೆಸ್ ಪಾರ್ಟಿ ಖಾಲಿ ಡಬ್ಬ ಅನ್ನೋದು ಇವತ್ತು ಸ್ಪಷ್ಟ ಆಗ್ತಾ ಇದೆ. ಜನರ ಪಾಲಿಗೆ ಚೊಂಬು ಬರಕ್ಕೆ ದುಡ್ಡು ಕೊಡೋಕಾಗಿಲ್ಲ ನಾಲ್ಕು ತಿಂಗಳು ಆಯ್ತು ಬರ ಐದು ತಿಂಗಳಿಂದ ಪೆನ್ಷನ್ ಹಣ ಕೊಟ್ಟಿಲ್ಲ. ಐದು ತಿಂಗಳು ಆಯ್ತು; ಬಡವರು ಸಾಯ್ತಾ ಇದ್ದಾರೆ. ಶಿಕ್ಷಕರಿಗೆ ಸಂಬಳ ಇಲ್ಲ, ರೈತರಿಗೆ ಕರೆಂಟ್ ಇಲ್ಲ. ಹಾಲು ಉತ್ಪಾದಕರು ಯಾರಿದ್ದಾರೋ ಅವರಿಗೆ 12 ತಿಂಗಳಿಂದ ಅವರಿಗೆ ಸಬ್ಸಿಡಿ ಹಣ ಕೊಟ್ಟಿಲ್ಲ, ಸಾವಿರಾರು ರೂಪಾಯಿ ಕೊಡಬೇಕು ಎಂದು ಆಕ್ಷೇಪಿಸಿದರು.

ಕ್ಯಾಬಿನೆಟ್ ಮಾಡಿದ್ದೆ ಮಾಡಿದ್ದು; ಏನು ಹೇಳಿದ್ದು ಹೇಳಿದ್ದೆ, ಘೋಷಣೆ. ಘೋಷಣೆಗಳ ಸರ್ಕಾರ, ಬೋಗಸ್ ಸರ್ಕಾರ. ಇವತ್ತು ಹಣಕಾಸು ಇಲಾಖೆಯವರು ಹೇಳಿದ್ದಾರೆ, ನೀವೊಬ್ಬರು ನಾಲಾಯಕ್ ಅನ್ನೋ ರೀತಿ ಅವರು ಹೇಳಿಲ್ಲ, ಆದರೆ ಅದರ ಅರ್ಥ ನೀವು ಫೈನಾನ್ಸ್ ಇಲಾಖೆಯನ್ನು ಅರ್ಥ ಮಾಡಿಕೊಂಡೆ, ನಿಮಗೆ ಮನಸ್ಸಿಗೆ ಬಂದಂಗೆ ಎಲ್ಲೆಲ್ಲಿ ಬೇಕೋ ಅಲ್ಲಲ್ಲಿ ಅನೌನ್ಸ್ ಮಾಡ್ಕೊಂಡು ಹೋಗ್ತಾ ಇದ್ದೀರಾ. ನ್ಯಾಯವೇ? ಎಂದು ಕೇಳಿದರು.

ಹಣಕಾಸು ಇಲಾಖೆಯವರು ಕೇಳುತ್ತಿದ್ದಾರೆ. ಮನಸ್ಸಿಗೆ ಬಂದಂಗೆ ಅನೌನ್ಸ್ ಮಾಡ್ಕೊಂಡು ಹೋಗ್ತಾ ಇದ್ದೀಯಲ್ಲಪ್ಪ ನ್ಯಾಯವೇ? ಫೈನಾನ್ಸ್ ಡಿಪಾರ್ಟ್ಮೆಂಟ್ ಅಲ್ಲಿ ಹಣನೇ ಇಲ್ಲ, ಸಾಲ ಕೊಡೋ ಗತಿಯೇ ಇಲ್ಲ ಇವತ್ತು ನಮಗೆ. ಕರ್ನಾಟಕ ಸರ್ಕಾರಕ್ಕೆ ಸಾಲ ಕೊಡಲ್ಲ ಅಂತ ಬರೆದುಕೊಟ್ಟಿದ್ದಾರೆ ಎಂದು ತಿಳಿಸಿದರು.

ಸಿದ್ದರಾಮಯ್ಯನವರು 22 ಸಾವಿರ ಕೋಟಿ ಕೊರತೆ ಮಾಡಿ ತೆರಳಿದ್ದಾರೆ. 2 ಲಕ್ಷ ಕೋಟಿ ಬಿಲ್ ಬಾಕಿ ಇದೆ ಎಂದು ಹಣಕಾಸು ಇಲಾಖೆಯವರು ಹೇಳಿದ್ದಾರೆ. ಸಾರಿಗೆ ಇಲಾಖೆಗೆ 5,000 ಕೋಟಿ ಬಾಕಿ ಇದೆ. ವಿದ್ಯುತ್ ಇಲಾಖೆಗೆ ಸಬ್ಸಿಡಿ ಬಾಕಿ ಇದೆ. ನೀವು ಮಂಗಳೂರಲ್ಲಿ ಘೋಷಣೆ, ಬೆಂಗಳೂರಲ್ಲಿ ಘೋಷಣೆ ಮಾಡುತ್ತೀರಿ ಎಂದು ಟೀಕಿಸಿದರು.

ಡಿ.ಕೆ. ಶಿವಕುಮಾರ್ ಸರ್ಕಾರವನ್ನು ಬೆತ್ತಲೆ ಮಾಡಿಬಿಟ್ಟಿದ್ದಾರೆ. ಒಂದು ಭಿಕಾರಿ ತರ ಇವತ್ತು ಸರ್ಕಾರ ಇವತ್ತು ಕರ್ನಾಟಕದಲ್ಲಿ ಇರೋದು ಭಿಕಾರಿ ಸರ್ಕಾರ ಎಂದು ಆರೋಪಿಸಿದರು.

ಬರಕ್ಕೆ ಒಂದು ಪೈಸೆ ಸಾಲ ಕೊಡಲ್ಲ ಅಂತ ಬರೆದಿದ್ದಾರೆ. ನಾಚಿಕೆ ಆಗಲ್ವಾ ನಿಮಗೆ? ಏನು ಆಕಾಶನೇ ಇಳಿಸೋ ರೀತಿ ಮಾತಾಡ್ತಾ ಇದ್ದೀರಿ ಎಂದರು. ನಿಮಗೆ ಅಧಿಕಾರ ಕೊಟ್ಟರೆ ನೀವು ರಾಹುಲ್ ಗಾಂಧಿಗೋಸ್ಕರ ಹಣ ಸಂಗ್ರಹಿಸುತ್ತಾ ಇದ್ದೀರಿ ಎಂದು ದೂರಿದರು.

ಪೆನ್ಷನ್ ಸಕಾಲಕ್ಕೆ ಕೊಡುತ್ತಿಲ್ಲ. ಆದರೆ ಎಟಿಎಂ ಮಾತ್ರ ರಾಹುಲ್ ಗಾಂಧಿಗೆ ಹೋಗೋ ಎಟಿಎಂ ಕರೆಕ್ಟ್ ಆಗಿ ಟೈಮ್ ಟು ಟೈಮ್ ಹೋಗುತ್ತಿದೆ ಎಂದು ಆರೋಪಿಸಿದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ, ಶಾಸಕರು, ವಿಧಾನಪರಿಷತ್ ಸದಸ್ಯರು ಉಪಸ್ಥಿತರಿದ್ದರು.

## ಶಿವಾನಂದ ತಗಡೂರುರಿಗೆ ರಾಜ್ಯ ನಾಟಕ ಅಕಾಡೆಮಿ ಪ್ರಶಸ್ತಿ ಪ್ರದಾನ




● ವಿಕ್ರಮ ವಾಹಿನಿ | ಬೆಂಗಳೂರು

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರು, ಹಿರಿಯ ಪತ್ರಕರ್ತರು ಹಾಗೂ ರಂಗಕರ್ಮಿ ಶಿವಾನಂದ ತಗಡೂರು ಅವರಿಗೆ ರಾಜ್ಯ ನಾಟಕ ಅಕಾಡೆಮಿಯ ವಾರ್ಷಿಕ ಪ್ರಶಸ್ತಿಯನ್ನು ವಿಧಾನ ಪರಿಷತ್ ಉಪಸಭಾಪತಿ ಉಮಾಶ್ರೀ ಅವರು ಪ್ರದಾನ ಮಾಡಿದರು.

ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಉಮಾಶ್ರೀ, "ರಂಗಭೂಮಿ ಯಾವ ಕಾಲಕ್ಕೂ ತನ್ನ ಜೀವಂತಿಕೆಯನ್ನು ಕಳೆದುಕೊಳ್ಳುವುದಿಲ್ಲ. ನಾನೂ ಕೂಡ ರಂಗಭೂಮಿ ಕಲಾವಿದೆಯಾಗಿ ಬೆಳೆದು ಈ ಎತ್ತರದ ಸ್ಥಾನಕ್ಕೆ ಬಂದಿದ್ದೇನೆ. ರಂಗಭೂಮಿಯ ಮೂಲಕ ಬೆಳೆದು ಬಂದಿರುವ ಎಲ್ಲ ಕಲಾವಿದರಿಗೂ ರಾಜ್ಯ ಸರ್ಕಾರದ ಪರವಾಗಿ ಅಭಿನಂದನೆಗಳು" ಎಂದು ಹೇಳಿದರು.

ಸಮಾರಂಭದಲ್ಲಿ ಹಿರಿಯ ನಟ ಹಾಗೂ ವಿಧಾನ ಪರಿಷತ್ ಮಾಜಿ ಸದಸ್ಯ ಮುಖ್ಯಮಂತ್ರಿ ಚಂದ್ರು, ನಾಟಕ ಅಕಾಡೆಮಿ ಅಧ್ಯಕ್ಷ ಡಾ. ಕೆ.ವಿ. ನಾಗರಾಜಮೂರ್ತಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ, ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಮುಕುಂದರಾಜ್, ಹಿರಿಯ ರಂಗಕರ್ಮಿ ಶ್ರೀನಿವಾಸ ಜಿ. ಕಪ್ಪಣ್ಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕಿ ಡಾ. ವಸುಂಧರಾ ಹಾಗೂ ರಿಜಿಸ್ಟ್ರಾರ್ ನೀಲಮ್ಮ, ಶೇಖ್ ಮಾಸ್ತರ ಉಪಸ್ಥಿತರಿದ್ದರು.

ಸಮಾರಂಭದಲ್ಲಿ ರಾಜ್ಯ ನಾಟಕ ಅಕಾಡೆಮಿಯ ವಾರ್ಷಿಕ ಪ್ರಶಸ್ತಿಗಳು ಹಾಗೂ ವಿವಿಧ ದತ್ತಿನಿಧಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು.


## ಬರ ಪರಿಹಾರಕ್ಕೆ ಶೇ.50ರಷ್ಟು ಮಧ್ಯಂತರ ನೆರವು ನೀಡಿ: ಮೋದಿಗೆ ಡಿಕೆಶಿ ಪತ್ರ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದಲ್ಲಿ ಬರ ಪರಿಸ್ಥಿತಿ ತೀವ್ರಗೊಂಡಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು, ಕೇಂದ್ರದಿಂದ ಕೋರಿರುವ ಪರಿಹಾರ ಮೊತ್ತದ ಶೇ.50ರಷ್ಟನ್ನು ತಕ್ಷಣ ಮಧ್ಯಂತರ ಪರಿಹಾರವಾಗಿ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದಾರೆ.

ರಾಜ್ಯದಲ್ಲಿ ಹೆಚ್ಚುವರಿಯಾಗಿ 76 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಒಟ್ಟು ಬರಪೀಡಿತ ತಾಲೂಕುಗಳ ಸಂಖ್ಯೆ 177ಕ್ಕೆ ಏರಿಕೆಯಾಗಿದೆ. ಈ ಹಿಂದೆ 101 ತಾಲೂಕುಗಳಿಗೆ 3,705.30 ಕೋಟಿ ಪರಿಹಾರ ಕೋರಿ ಕೇಂದ್ರಕ್ಕೆ ಮನವಿ ಸಲ್ಲಿಸಲಾಗಿತ್ತು. ಮಳೆ ಕೊರತೆಯಿಂದ 40 ಲಕ್ಷ ಹೆಕ್ಟೇರ್‌ಗೂ ಅಧಿಕ ಪ್ರದೇಶದಲ್ಲಿ ಬೆಳೆ ನಷ್ಟದ ಆತಂಕವಿದ್ದು, ಜಲಾಶಯಗಳ ನೀರಿನ ಸಂಗ್ರಹ, ಅಂತರ್ಜಲ ಮರುಪೂರಣ ಹಾಗೂ ಜಾನುವಾರುಗಳ ಮೇವಿನ ಲಭ್ಯತೆಯ ಮೇಲೂ ಪರಿಣಾಮ ಬೀರಿದೆ. ರೈತರಿಗೆ ಇನ್‌ಪುಟ್ ಸಬ್ಸಿಡಿ, ಜಾನುವಾರುಗಳ ರಕ್ಷಣೆ ಮತ್ತು ಕುಡಿಯುವ ನೀರು ಪೂರೈಕೆಗೆ ತುರ್ತು ಕ್ರಮ ಕೈಗೊಳ್ಳಬೇಕಿರುವುದರಿಂದ ಮಧ್ಯಂತರ ನೆರವು ಅಗತ್ಯ ಎಂದು ಡಿಕೆಶಿ ತಿಳಿಸಿದ್ದಾರೆ.

ಕೇಂದ್ರದ ಅಂತರ–ಸಚಿವಾಲಯ ತಂಡದ ಪರಿಶೀಲನೆ ಹಾಗೂ ಅಂತಿಮ ಅನುಮೋದನೆಗೆ ಸಮಯ ಬೇಕಾಗುವ ಹಿನ್ನೆಲೆಯಲ್ಲಿ ವಿಳಂಬ ಮಾಡದೆ ಪರಿಹಾರ ಬಿಡುಗಡೆ ಮಾಡಬೇಕು. ಜತೆಗೆ ರಾಜ್ಯ ವಿಪತ್ತು ಪರಿಹಾರ ನಿಧಿಯ ಎರಡನೇ ಕಂತಿನ ಕೇಂದ್ರದ ಪಾಲನ್ನೂ ಮುಂಚಿತವಾಗಿ ಬಿಡುಗಡೆ ಮಾಡುವಂತೆ ಅವರು ಮನವಿ ಮಾಡಿದ್ದಾರೆ.



**ಶ್ರೀ ಪೇಜಾವರ ಶ್ರೀಗಳ ಚಾತುರ್ಮಾಸ್ಯ 2026ರ ಅಂಗವಾಗಿ ವಸಂತ ಕುಂಜ್‌ನ ವೇದವ್ಯಾಸ ಗುರುಕುಲಕ್ಕೆ ಬುಧವಾರ ಭೇಟಿ ನೀಡಿದ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ದೇವರ ದರ್ಶನ ಪಡೆದು, ಪೇಜಾವರ ಶ್ರೀಗಳೊಂದಿಗೆ ಧಾರ್ಮಿಕ ಹಾಗೂ ಸಾಮಾಜಿಕ ಸೇವಾ ಕಾರ್ಯಗಳ ಕುರಿತು ಚರ್ಚಿಸಿದರು. ಪೇಜಾವರ ಮಠವು ದಶಕಗಳಿಂದ ಹಿಂದೂ ಸಮಾಜದಲ್ಲಿನ ಅಸ್ಪೃಶ್ಯತಾ ನಿವಾರಣೆಗಾಗಿ ಹಿಂದುಳಿದ ವರ್ಗಗಳು ಹಾಗೂ ಪರಿಶಿಷ್ಟ ಬಂಧುಗಳ ಬಡಾವಣೆಗಳಿಗೆ ಭೇಟಿ ನೀಡಿ ಜಾಗೃತಿ ಮೂಡಿಸುತ್ತಿರುವ ಕಾರ್ಯವನ್ನು ಅವರು ಶ್ಲಾಘಿಸಿದರು. ದೆಹಲಿಯ ಚಾತುರ್ಮಾಸ್ಯದ ಸಂದರ್ಭದಲ್ಲೂ ಈ ಸೇವಾ ಕಾರ್ಯ ಮುಂದುವರಿಸಿರುವುದು ಸಂತಸದ ಸಂಗತಿ ಎಂದ ಅವರು, ಮಠದ ಗುರುಕುಲಗಳ ಮೂಲಕ ಧರ್ಮಶಾಸ್ತ್ರಗಳ ಸಂರಕ್ಷಣೆ ಮಾಡುತ್ತಿರುವ ಕಾರ್ಯವೂ ಅತ್ಯಂತ ಅಗತ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸಾಂಪ್ರದಾಯಿಕ ಪೂರ್ಣಕುಂಭ ಸ್ವಾಗತ ಹಾಗೂ ಗುರುಕುಲದ ಮಕ್ಕಳ ವೇದಘೋಷದೊಂದಿಗೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರನ್ನು ಬರಮಾಡಿಕೊಳ್ಳಲಾಯಿತು. ಬಳಿಕ ಅವರು ಮಕ್ಕಳಿಗೆ ಹಣ್ಣು ವಿತರಿಸಿ ಸಂತಸ ಹಂಚಿಕೊಂಡರು. ಉಪರಾಷ್ಟ್ರಪತಿಗಳು ಪೇಜಾವರ ಶ್ರೀಗಳಿಗೆ ಫಲಪುಷ್ಪ ಹಾಗೂ ಗುರುಕಾಣಿಕೆ ಸಮರ್ಪಿಸಿ ಗೌರವ ಸಲ್ಲಿಸಿದರೆ, ಪೇಜಾವರ ಶ್ರೀಗಳು ಉಪರಾಷ್ಟ್ರಪತಿಗಳನ್ನು ಸನ್ಮಾನಿಸಿ ಆಶೀರ್ವದಿಸಿದರು.**

## 'ನಮ್ಮ ಕಷ್ಟ ಅರ್ಥ ಮಾಡಿಕೊಳ್ಳಿ': ರೀಲ್ಸ್ ಮೂಲಕ ರಸ್ತೆ ಸಮಸ್ಯೆ ತೆರೆದಿಟ್ಟ ಬಾಲಕ

● ವಿಕ್ರಮ ವಾಹಿನಿ | ಧಾರವಾಡ

*ಗ್ರಾಮದ ಹದಗೆಟ್ಟ ರಸ್ತೆಯ ದುಸ್ಥಿತಿಯನ್ನು ಶಾಲಾ ಬಾಲಕನೊಬ್ಬ ರೀಲ್ಸ್ ಮೂಲಕ ತೆರೆದಿಟ್ಟು, ಕೂಡಲೇ ರಸ್ತೆ ದುರಸ್ತಿ ಮಾಡಿಸುವಂತೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಿಗೆ ಮನವಿ ಮಾಡಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.*

*ಧಾರವಾಡ ತಾಲೂಕಿನ ಹಾರೋಬೆಳವಡಿ ಗ್ರಾಮದಿಂದ ಆಯಟ್ಟಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ರಸ್ತೆಯುದ್ದಕ್ಕೂ ಗುಂಡಿಗಳು ಬಿದ್ದಿವೆ. ವಾಹನ ಸಂಚಾರ ಮಾತ್ರವಲ್ಲದೆ, ಕಾಲ್ನಡಿಗೆಯಲ್ಲಿ ತೆರಳುವುದಕ್ಕೂ ತೊಂದರೆಯಾಗುತ್ತಿದೆ ಎಂದು ಬಾಲಕ ವಿಡಿಯೋದಲ್ಲಿ ಅಳಲು ತೋಡಿಕೊಂಡಿದ್ದಾನೆ.*

*ರಸ್ತೆಯ ದುಸ್ಥಿತಿಯಿಂದ ಶಾಲೆಗೆ ತೆರಳಲು ವಿದ್ಯಾರ್ಥಿಗಳು ಸಮಸ್ಯೆ ಎದುರಿಸುತ್ತಿದ್ದಾರೆ. 'ನಮ್ಮ ಕಷ್ಟವನ್ನು ಅರ್ಥ ಮಾಡಿಕೊಳ್ಳಿ' ಎಂದು ಕೈಮುಗಿದು ಮನವಿ ಮಾಡಿರುವ ಬಾಲಕ, ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಕೂಡಲೇ ರಸ್ತೆ ದುರಸ್ತಿ ಕಾರ್ಯ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾನೆ. ಬಾಲಕನ ಮನವಿಗೆ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಪ್ರತಿಕ್ರಿಯೆ ವ್ಯಕ್ತವಾಗಿದೆ.*

## ತಿರುಪತಿ ಮಾದರಿಯಲ್ಲಿ ಮಾದಪ್ಪನ ಸನ್ನಿಧಾನ

● ವಿಕ್ರಮ ವಾಹಿನಿ | ಚಾಮರಾಜನಗರ

ಮಲೆ ಮಹಾದೇಶ್ವರ ಬೆಟ್ಟಕ್ಕೆ ಆಗಮಿಸುವ ಭಕ್ತರಿಗೆ ಸುಗಮ ಹಾಗೂ ಶಿಸ್ತುಬದ್ಧ ದರ್ಶನ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ತಿರುಪತಿ ಮಾದರಿಯಲ್ಲಿ ನೂತನ ಕ್ಯೂ ಕಾಂಪ್ಲೆಕ್ಸ್ ನಿರ್ಮಿಸಲಾಗುತ್ತಿದೆ.

ಮಲೆ ಮಹಾದೇಶ್ವರ ಅಭಿವೃದ್ಧಿ ಪ್ರಾಧಿಕಾರ ಹಾಗೂ ಸ್ಥಳೀಯ ಶಾಸಕ ಎಂ.ಆರ್. ಮಂಜುನಾಥ್ ಅವರ ಯೋಜನೆಯಂತೆ ಸುಮಾರು ₹30 ಕೋಟಿ ವೆಚ್ಚದಲ್ಲಿ ಕೈಗೊಂಡಿರುವ ಕಾಮಗಾರಿ ಬಹುತೇಕ ಪೂರ್ಣಗೊಂಡಿದೆ. ನಾಲ್ಕು ಬೃಹತ್ ಬ್ಯಾರಕ್‌ಗಳನ್ನು ನಿರ್ಮಿಸಲಾಗಿದ್ದು, ಪ್ರತಿ ಬ್ಲಾಕ್‌ನಲ್ಲಿ ಸುಮಾರು 1,000 ಮಂದಿ ಸೇರಿದಂತೆ ಒಟ್ಟು 4,000 ಭಕ್ತರು ಕುಳಿತುಕೊಳ್ಳಲು ವ್ಯವಸ್ಥೆ ಮಾಡಲಾಗಿದೆ. ಕುಡಿಯುವ ನೀರು, ಪ್ರಸಾದ ಹಾಗೂ ಶೌಚಾಲಯದ ಸೌಲಭ್ಯಗಳನ್ನೂ ಕಲ್ಪಿಸಲಾಗಿದ್ದು, ಮುಖ್ಯ ದರ್ಶನದ ಸಾಲು ಖಾಲಿಯಾದಂತೆ ಭಕ್ತರನ್ನು ಹಂತ ಹಂತವಾಗಿ ದರ್ಶನಕ್ಕೆ ಕಳುಹಿಸಲಾಗುತ್ತದೆ.

## ಹೊಸ ಉಸ್ತುವಾರಿಗಳ ನೇಮಕ ಬಗ್ಗೆ ಯತ್ನಾಳ್ ಸ್ಫೋಟಕ ಹೇಳಿಕೆ

● ವಿಕ್ರಮ ವಾಹಿನಿ | ಬೆಂಗಳೂರು

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನವೀನ್ ಅವರು ವಿವಿಧ ರಾಜ್ಯಗಳ ಉಸ್ತುವಾರಿಗಳ ಪಟ್ಟಿಯನ್ನು ಪ್ರಕಟಿಸಿದ್ದು, ಕರ್ನಾಟಕ ಬಿಜೆಪಿ ಉಸ್ತುವಾರಿ ಸ್ಥಾನದಲ್ಲಿ ಬದಲಾವಣೆ ಮಾಡಲಾಗಿದೆ. ಈ ಹಿಂದೆ ಕರ್ನಾಟಕದ ಉಸ್ತುವಾರಿಯಾಗಿದ್ದ ರಾಧಾ ಮೋಹನ್ ದಾಸ್ ಅಗರ್ವಾಲ್ ಹಾಗೂ ಸಹ ಉಸ್ತುವಾರಿ ಸುಧಾಕರ್ ರೆಡ್ಡಿ ಅವರನ್ನು ಜವಾಬ್ದಾರಿಯಿಂದ ಕೈಬಿಡಲಾಗಿದ್ದು, ಕರ್ನಾಟಕದ ನೂತನ ಪ್ರಭಾರಿಯಾಗಿ ಹರೀಶ್ ದ್ವಿವೇದಿ ಹಾಗೂ ಸಹ–ಪ್ರಭಾರಿಯಾಗಿ ಡಾ. ಕಸಮ್ ವೆಂಕಟೇಶ್ವರ್ಲು ಅವರನ್ನು ನೇಮಕ ಮಾಡಲಾಗಿದೆ.

ಈ ಬದಲಾವಣೆ ಕುರಿತು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಪ್ರತಿಕ್ರಿಯಿಸಿದ್ದು, ಹಿಂದೆ ಅರುಣ್ ಸಿಂಗ್ ಮತ್ತು ರಾಧಾ ಮೋಹನ್ ದಾಸ್ ಅಗರ್ವಾಲ್ ಉಸ್ತುವಾರಿಗಳಾಗಿದ್ದಾಗಲೂ ಸಾಕಷ್ಟು ನಿರೀಕ್ಷೆಗಳಿದ್ದವು. ಆದರೆ, ಅದರಿಂದ ಯಾವುದೇ ಲಾಭವಾಗಲಿಲ್ಲ ಎಂದು ಹೇಳಿದ್ದಾರೆ.

ನವೆಂಬರ್‌ನಲ್ಲಿ ರಾಜ್ಯ ಬಿಜೆಪಿ ಅಧ್ಯಕ್ಷರ ಬದಲಾವಣೆ ಯಾದರೆ, ಈ ಉಸ್ತುವಾರಿಗಳು ಸರಿಯಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಅನ್ನಿಸುತ್ತದೆ ಎಂದು ಅವರು ಹೇಳಿದ್ದಾರೆ. ತಮ್ಮ ಉಚ್ಚಾಟನೆಯ ಬಳಿಕ ಯಾವುದೇ ಬಿಜೆಪಿ ನಾಯಕರನ್ನು ಭೇಟಿಯಾಗಿಲ್ಲ. ಉಚ್ಚಾಟನೆಯನ್ನು ಮರುಪರಿಶೀಲಿಸುವಂತೆ ತಾನು ಯಾವುದೇ ಅರ್ಜಿ ಸಲ್ಲಿಸಿಲ್ಲ. ಬಳಿಕ ಬಿಜೆಪಿಯನ್ನೂ ಟೀಕಿಸಿಲ್ಲ. ಯಡಿಯೂರಪ್ಪ ಕುಟುಂಬದ ಭ್ರಷ್ಟಾಚಾರದ ವಿಚಾರ ಹೊರತುಪಡಿಸಿ ಬೇರೆ ಯಾವುದೇ ಬಿಜೆಪಿ ನಾಯಕರನ್ನು ಟೀಕಿಸಿಲ್ಲ ಎಂದು ಯತ್ನಾಳ್ ಸ್ಪಷ್ಟಪಡಿಸಿದ್ದಾರೆ.

ದೇಶವಿರೋಧಿ ಚಟುವಟಿಕೆ ನಡೆಸುವವರೊಂದಿಗೆ ತಾನು ಯಾವುದೇ ರೀತಿಯ ಸಂಬಂಧ ಹೊಂದಿಲ್ಲ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಸಿದ್ದರಾಮಯ್ಯ ಅವರೊಂದಿಗೆ ಹೊಂದಾಣಿಕೆ ಮಾಡಿಕೊಂಡಿಲ್ಲ. ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಯಾರಿಗೆ ಮತ ಹಾಕುವಂತೆ ಸೂಚಿಸಿತ್ತೋ ಅವರಿಗೆ ಮತ ಹಾಕಿದ್ದೇನೆ. ತನ್ನ ನಿಷ್ಠೆ ಬಿಜೆಪಿ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಗಿದೆ ಎಂಬುದನ್ನು ತೋರಿಸಿಕೊಟ್ಟಿದ್ದೇನೆ ಎಂದು ಅವರು ಹೇಳಿದ್ದಾರೆ.

ಮುಂದೆಯಾದರೂ ಈ ಎಲ್ಲ ವಿಚಾರಗಳನ್ನು ಪರಿಗಣಿಸಿ ಬಿಜೆಪಿಯಲ್ಲಿ ಮಹತ್ವದ ಹುದ್ದೆ ನೀಡುವ ಕುರಿತು ಪರಿಶೀಲನೆ ನಡೆಸಿದರೆ ಮಾತ್ರ ಪಕ್ಷಕ್ಕೆ ಮರಳುವ ಬಗ್ಗೆ ಚರ್ಚಿಸುತ್ತೇನೆ ಎಂದು ಬಸನಗೌಡ ಪಾಟೀಲ್ ಯತ್ನಾಳ್ ತಿಳಿಸಿದ್ದಾರೆ.

# ದಿವಾಳಿ ಅಂಚಿಗೆ ರಾಜ್ಯ ಸರ್ಕಾರ: ವಿಜಯೇಂದ್ರ

## ಕೃಷಿ ಸಾಲ ಮನ್ನಾ ಮಾಡಿ; 7–8 ಗಂಟೆ ತ್ರಿಫೇಸ್ ವಿದ್ಯುತ್ ನೀಡಿ, ಹೈನುಗಾರಿಕೆ ಸಹಾಯಧನ ಹೆಚ್ಚಿಸಿ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದ ಕಾಂಗ್ರೆಸ್ ಸರ್ಕಾರ ಸಾಲದ ಸುಳಿಯಲ್ಲಿ ಸಿಲುಕಿ ದಿವಾಳಿಯ ಅಂಚಿಗೆ ತಲುಪಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ವಿಧಾನಸೌಧದ ಬಿಜೆಪಿ ಕಚೇರಿ ಸಂಖ್ಯೆ 101ರಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರ ಸಂಕಷ್ಟಕ್ಕೆ ಸರ್ಕಾರ ತಕ್ಷಣ ಸ್ಪಂದಿಸಬೇಕು. ರಾಜ್ಯದಲ್ಲಿ ರೈತರ ಕೃಷಿ ಸಾಲವನ್ನು ರೂ 5 ಲಕ್ಷದವರೆಗೆ ಮನ್ನಾ ಮಾಡಬೇಕು ಹಾಗೂ ಪ್ರತಿ ಹೆಕ್ಟೇರ್‌ಗೆ ರೂ 50 ಸಾವಿರ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಮಹಾರಾಷ್ಟ್ರ ಸರ್ಕಾರ ರೈತರ ಕೃಷಿ ಸಾಲ ಮನ್ನಾ ಮಾಡಿರುವ ಮಾದರಿಯಲ್ಲಿ ಕರ್ನಾಟಕದಲ್ಲೂ ರೈತರಿಗೆ ನೆರವು ನೀಡಬೇಕು. ಬರದ ಸಂದರ್ಭದಲ್ಲಿ ರೈತರಿಗೆ ನಿರಂತರ 7–8 ಗಂಟೆ ತ್ರಿಫೇಸ್ ವಿದ್ಯುತ್ ಪೂರೈಸಬೇಕು. ವಿದ್ಯುತ್ ಪೂರೈಸಲು ಸಾಧ್ಯವಾಗದಿದ್ದರೆ ಅಗತ್ಯ ಪ್ರಮಾಣದಲ್ಲಿ ವಿದ್ಯುತ್ ಖರೀದಿಸಿಯಾದರೂ ರೈತರ ಬೆಳೆ ಉಳಿಸಬೇಕು ಎಂದು ಆಗ್ರಹಿಸಿದರು.

**ಹಾಲಿನ ಪ್ರೋತ್ಸಾಹಧನ ಹೆಚ್ಚಿಸಿ:** ರೈತರ ಪ್ರಮುಖ ಆದಾಯದ ಮೂಲವಾಗಿರುವ ಹೈನುಗಾರಿಕೆಗೆ ಸರ್ಕಾರ ಹೆಚ್ಚಿನ ನೆರವು ನೀಡಬೇಕು. ಪ್ರಸ್ತುತ ಪ್ರತಿ ಲೀಟರ್‌ಗೆ ನೀಡುತ್ತಿರುವ ರೂ 5ರ ಪ್ರೋತ್ಸಾಹಧನವನ್ನು ರೂ 8ಕ್ಕೆ ಹೆಚ್ಚಿಸುವ ಜತೆಗೆ ಬಾಕಿ ಇರುವ ಪ್ರೋತ್ಸಾಹಧನವನ್ನೂ ತಕ್ಷಣ ಬಿಡುಗಡೆ ಮಾಡಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು.

ಉತ್ತರ ಕರ್ನಾಟಕದಲ್ಲಿ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ)ಯಡಿ ಖರೀದಿಸಿರುವ ಮೆಕ್ಕೆಜೋಳದ ನೂರಾರು ಕೋಟಿ ರೂ. ಬಾಕಿಯನ್ನು ಸರ್ಕಾರ ರೈತರಿಗೆ ಪಾವತಿಸಿಲ್ಲ. ರಾಯಚೂರು ಜಿಲ್ಲೆಯಲ್ಲೇ ಸುಮಾರು ರೂ 100–150 ಕೋಟಿ ಬಾಕಿ ಇದೆ ಎಂದು ಹೇಳಲಾಗುತ್ತಿದ್ದು, ಈ



ಹಣವನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದರು.

**ರಾಜ್ಯದ ಆರ್ಥಿಕ ಪರಿಸ್ಥಿತಿ ಕುಸಿತ:** ರಾಜ್ಯದ ಆರ್ಥಿಕ ಪರಿಸ್ಥಿತಿ ಸಂಪೂರ್ಣವಾಗಿ ಹದಗೆಟ್ಟಿದೆ ಎಂದು ಆರೋಪಿಸಿದ ವಿಜಯೇಂದ್ರ, ಇತ್ತೀಚೆಗೆ ಮುಖ್ಯಮಂತ್ರಿ ದಕ್ಷಿಣ ಕನ್ನಡಕ್ಕೆ ತೆರಳಿ ರೂ 32 ಸಾವಿರ ಕೋಟಿ ಮೊತ್ತದ ಅಭಿವೃದ್ಧಿ ಯೋಜನೆಗಳನ್ನು ಘೋಷಿಸಿದ್ದಾರೆ. ಆದರೆ ಈ ಯೋಜನೆಗಳಿಗೆ ಹಣ ಎಲ್ಲಿಂದ ತರಲಾಗುತ್ತದೆ ಎಂಬುದನ್ನು ಸ್ಪಷ್ಟಪಡಿಸಿಲ್ಲ ಎಂದು ಟೀಕಿಸಿದರು.

ಬಜೆಟ್‌ನಲ್ಲಿ ಘೋಷಿಸಿ, ಹಣ ಮೀಸಲಿಡದ ಸಾವಿರಾರು ಕೋಟಿ ರೂ. ಮೊತ್ತದ ಯೋಜನೆಗಳನ್ನು ಆರಂಭಿಸುವುದರಿಂದ ನಗದು ಹರಿವು ಹಾಗೂ ವಿತ್ತೀಯ ನಿರ್ವಹಣೆಯಲ್ಲಿ ಸಮಸ್ಯೆ ಉಂಟಾಗಲಿದೆ ಎಂದು ಹಣಕಾಸು ಇಲಾಖೆ ಎಚ್ಚರಿಸಿದೆ. ರಾಜ್ಯವು ತನ್ನ ಸಾಲ ಮಾಡುವ ಸಾಮರ್ಥ್ಯವನ್ನು

**ಬರದಿಂದ ಸಂಕಷ್ಟದಲ್ಲಿರುವ ರೈತರ ಕೃಷಿ ಸಾಲವನ್ನು ರೂ 5 ಲಕ್ಷದವರೆಗೆ ಮನ್ನಾ ಮಾಡಿ, ಪ್ರತಿ ಹೆಕ್ಟೇರ್‌ಗೆ ರೂ 50 ಸಾವಿರ ಪರಿಹಾರ ನೀಡಬೇಕು. 7–8 ಗಂಟೆ ತ್ರಿಫೇಸ್ ವಿದ್ಯುತ್ ಪೂರೈಕೆ, ಹಾಲಿನ ಪ್ರೋತ್ಸಾಹಧನ ಹೆಚ್ಚಳ ಹಾಗೂ ಬಾಕಿ ಪಾವತಿಗೆ ಕ್ರಮ ಕೈಗೊಳ್ಳಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.**

ಈಗಾಗಲೇ ಬಹುತೇಕ ಸಂಪೂರ್ಣವಾಗಿ ಬಳಸಿಕೊಂಡಿದ್ದು, ಹೊಸ ಯೋಜನೆಗಳಿಗೆ ಹೆಚ್ಚಿನ ಸಾಲ ಪಡೆಯುವ ಅವಕಾಶವೂ ಸೀಮಿತವಾಗಿದೆ ಎಂದು ಆರ್ಥಿಕ ಇಲಾಖೆ ತಿಳಿಸಿದೆ ಎಂದು ವಿಜಯೇಂದ್ರ ಹೇಳಿದರು.

ರಾಜ್ಯ ಸರ್ಕಾರದ ರೂ 2 ಲಕ್ಷ ಕೋಟಿಗೂ ಅಧಿಕ ಮೊತ್ತದ ಕಾಮಗಾರಿಗಳು ಈಗಾಗಲೇ ಬಾಕಿ ಉಳಿದಿವೆ. ಹೊಸ ಪ್ರಸ್ತಾವನೆಗಳಿಗೆ ಹಣ ಒದಗಿಸಲು ಇಲಾಖೆಗಳ ಹಂಚಿಕೆಯಲ್ಲಿ ಕಡಿತ ಮಾಡಬೇಕಾಗುತ್ತದೆ. ಇದರಿಂದ ಇತರ ಕಾಮಗಾರಿಗಳು ವಿಳಂಬವಾಗುವ ಅಥವಾ ಸ್ಥಗಿತಗೊಳ್ಳುವ ಸಾಧ್ಯತೆ ಇದೆ ಎಂದು ಇಲಾಖೆ ತಿಳಿಸಿದೆ ಎಂದರು.

**'ಬಾಕಿಗಳ ಸರ್ಕಾರ':** ಸಾರಿಗೆ ಇಲಾಖೆಗೆ ರಾಜ್ಯ ಸರ್ಕಾರ ಸುಮಾರು ರೂ 6 ಸಾವಿರ ಕೋಟಿ ಬಾಕಿ ಉಳಿಸಿಕೊಂಡಿದೆ. ಇದರ ಪರಿಣಾಮವಾಗಿ ಬಸ್ ಚಾಲಕರು ಹಾಗೂ ಇತರ ಸಿಬ್ಬಂದಿಗೆ ವೇತನ ಪಾವತಿಸುವುದಕ್ಕೂ ಸಮಸ್ಯೆಯಾಗುತ್ತಿದೆ ಎಂದು ವಿಜಯೇಂದ್ರ ಆರೋಪಿಸಿದರು.

ಮುಖ್ಯಮಂತ್ರಿ ರೂ 10 ಸಾವಿರ ಕೋಟಿ ವೆಚ್ಚದಲ್ಲಿ ಗ್ರಾಮೀಣ ರಸ್ತೆ ಅಭಿವೃದ್ಧಿಪಡಿಸುವುದಾಗಿ ಘೋಷಿಸಿದ್ದಾರೆ. ಆದರೆ ಹೊಸ ಯೋಜನೆಗಳಿಗೆ ಹಣ ನೀಡಲು ಸಾಧ್ಯವಿಲ್ಲ ಎಂದು ಹಣಕಾಸು ಇಲಾಖೆ ಪದೇಪದೇ ಸ್ಪಷ್ಟಪಡಿಸುತ್ತಿರುವಾಗ ಈ ಯೋಜನೆ ಹೇಗೆ ಅನುಷ್ಠಾನಗೊಳ್ಳಲಿದೆ ಎಂದು ಪ್ರಶ್ನಿಸಿದರು.

**ಬರ ಪರಿಹಾರಕ್ಕೆ ಒತ್ತಾಯ:** ಭೀಕರ ಬರದ ಸಂದರ್ಭದಲ್ಲಿ ರೈತರಿಗೆ ಪರಿಹಾರ ನೀಡಬೇಕಾದ ಸರ್ಕಾರ ಕೇಂದ್ರಕ್ಕೆ ಪತ್ರ ಬರೆಯುವುದಕ್ಕೆ ಸೀಮಿತವಾಗಬಾರದು. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ತುರ್ತು ಪರಿಸ್ಥಿತಿಯಲ್ಲಿ ಕುಟುಂಬಗಳಿಗೆ ಪರಿಹಾರ ನೀಡಲಾಗಿತ್ತು. ಮನೆ ಕಳೆದುಕೊಂಡವರಿಗೆ ರೂ 5 ಲಕ್ಷ ಪರಿಹಾರ ನೀಡುವ ಮೂಲಕ ತಕ್ಷಣ ಸ್ಪಂದಿಸಲಾಗಿತ್ತು. ಅದೇ ರೀತಿಯಲ್ಲಿ ಪ್ರಸ್ತುತ ಸರ್ಕಾರವೂ ರೈತರ ಹಾಗೂ ಬಡವರ ಸಂಕಷ್ಟಕ್ಕೆ ತಕ್ಷಣ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ರೈತರ ಸಾಲ ಮನ್ನಾ, ಪ್ರತಿ ಹೆಕ್ಟೇರ್‌ಗೆ ರೂ 50 ಸಾವಿರ ಪರಿಹಾರ, 7–8 ಗಂಟೆ ತ್ರಿಫೇಸ್ ವಿದ್ಯುತ್, ಹಾಲಿನ ಪ್ರೋತ್ಸಾಹಧನ ಹೆಚ್ಚಳ ಮತ್ತು ಬಾಕಿ ಪಾವತಿ ಸೇರಿದಂತೆ ರೈತರ ತುರ್ತು ಬೇಡಿಕೆಗಳಿಗೆ ಸರ್ಕಾರ ಸ್ಪಂದಿಸಬೇಕು. ಬರದ ಸಂದರ್ಭದಲ್ಲಿ ಕೇವಲ ಘೋಷಣೆಗಳಿಗೆ ಸೀಮಿತವಾಗದೆ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಗೃಹ ಸಚಿವ ಹಾಗೂ ಶಾಸಕ ಅರಗ ಜ್ಞಾನೇಂದ್ರ, ವಿಧಾನಸಭೆಯ ವಿಪಕ್ಷ ಮುಖ್ಯ ಸಚೇತಕ ದೊಡ್ಡನಗೌಡ ಎಚ್. ಪಾಟೀಲ್, ಶಾಸಕರಾದ ಬಿ. ಸುರೇಶ್ ಗೌಡ, ಡಾ. ವೈ. ಭರತ್ ಶೆಟ್ಟಿ ಹಾಗೂ ಮಹೇಶ್ ಟೆಂಗಿನಕಾಯಿ ಉಪಸ್ಥಿತರಿದ್ದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 171,